# ಪ್ರವಾದಿ ಹೊಶೇಯನ ಗ್ರಂಥ
## ಹನ್ನೆರಡು ಮಂದಿ ಕಿರಿಯ ಪ್ರವಾದಿಗಳು

### ಮುನ್ನುಡಿ

ಇಸ್ರಯೇಲಿನ ದಕ್ಷಿಣ ಭಾಗವಾದ ಜುದೇಯದಲ್ಲಿ ಈ ಮೊದಲೇ ಬೋಧನೆ ಮಾಡಿದವನು ಪ್ರವಾದಿ ಆಮೋಸನು. ಅವನು ಕಾಲವಾದ ನಂತರ ಪ್ರವಾದಿ ಹೊಶೇಯನು ಇಸ್ರಯೇಲಿನ ಉತ್ತರಭಾಗದಲ್ಲಿ ಪ್ರವಾದನೆ ಮಾಡಲು ಆರಂಭಿಸಿದನು. ಕ್ರಿ. ಪೂ. 721ರಲ್ಲಿ ಸಮಾರ್ಯ ರಾಜ್ಯವು ಪತನವಾಯಿತು. ಅದಕ್ಕೆ ಮುಂಚೆ ಸನ್ನಿವೇಶವು ಬಹಳ ಬಿಕ್ಕಟ್ಟಿನಿಂದ ಕೂಡಿತ್ತು. ಅಂಥ ಸಂದರ್ಭದಲ್ಲಿ ಹೊಶೇಯನು ಪ್ರವಾದನೆಯ ಕಾರ್ಯವನ್ನು ಕೈಗೊಳ್ಳಬೇಕಾಯಿತು.

ಇಸ್ರಯೇಲ್ ಜನರು ದೇವರಿಗೆ ವಿಮುಖರಾಗಿ ವಿಗ್ರಹಾರಾಧನೆ ಮಾಡತೊಡಗಿದ್ದರು. ಅವರ ಅಪ್ರಾಮಾಣಿಕತೆಯನ್ನೂ ಭಕ್ತಿಹೀನತೆಯನ್ನೂ ಕಂಡು ಪ್ರವಾದಿ ಕುಪಿತನಾಗುತ್ತಾನೆ. ತನ್ನ ಧರ್ಮಪತ್ನಿಯಾದ ಗೋಮೆರಳೇ ತನಗೆ ಅಪ್ರಾಮಾಣಿಕಳಾಗಿ ನಡೆದುಕೊಂಡ ಕಹಿ ಅನುಭವವನ್ನು ಈಗಾಗಲೇ ಅವನು ಸವಿದಿದ್ದನು. ಈಗ ತನ್ನ ಇಡೀ ಜನಾಂಗವೇ ದೇವರಿಗೆ ಅಪ್ರಾಮಾಣಿಕವಾಗಿ ನಡೆದುಕೊಳ್ಳುತ್ತಿರುವುದನ್ನು ಕಂಡು ರೋಷಾವೇಶಗೊಳ್ಳುತ್ತಾನೆ. ದೇವರ ಶಾಪ ಇಸ್ರಯೇಲಿನ ಮೇಲೆ ಬಂದೇತೀರುವುದು ಎಂದು ಎಚ್ಚರಿಸುತ್ತಾನೆ.

ಆದರೂ ದೇವರಿಗೆ ತನ್ನ ಪ್ರಜೆಯ ಮೇಲಿರುವ ಪ್ರೀತಿ ಅಚಲವಾದುದು. ಆ ಪ್ರೀತಿಗೆ ಜಯ ಖಚಿತವಾದುದು. ಎಂತಲೇ ಇಸ್ರಯೇಲ್ ಜನತೆಯನ್ನು ದೇವರು ಪುನರುದ್ಧಾರಗೊಳಿಸುವರು. ಅವರೊಡನೆ ಸತ್ಸಂಬಂಧವನ್ನು ಮತ್ತೆ ಬೆಳೆಸುವರು ಎಂದು ಆಶ್ವಾಸನೆ ನೀಡುತ್ತಾನೆ. ದೇವರಿಗೆ ಜನರ ಮೇಲಿರುವ ಪ್ರೀತಿ ಎಷ್ಟು ಅಮೋಘವಾದುದು ಎಂಬುದನ್ನು ಹೊಶೇಯನ ಈ ವಚನ ವ್ಯಕ್ತಪಡಿಸುತ್ತದೆ:

> "ಇಸ್ರಯೇಲ್, ನಿನ್ನನ್ನು ಹೇಗೆ ಕೈಬಿಡಲಿ
> ನನ್ನ ಮನಸ್ಸು ಮರುಗಿತು, ನನ್ನ ಕರುಳು ಕರಗಿತು" (11.8)

### ಪರಿವಿಡಿ


| | | | | |
|---|---|---|---|---|
| ಹೊಶೇಯನ ಮಡದಿ ಮಕ್ಕಳು | – | 1.1 | – | 3.5 |
| ಭಕ್ತಿಹೀನ ಇಸ್ರಯೇಲರ ಖಂಡನೆ | – | 4.1 | – | 13.16 |
| ಪಶ್ಚಾತ್ತಾಪಕ್ಕೆ ಕರೆ – ಆಶ್ವಾಸನೆ | – | 14.1 | – | 9 |

**1** ಜುದೇಯ ನಾಡಿನಲ್ಲಿ ಉಜ್ಜೀಯ, ಯೋತಾಮ, ಆಹಾಜ ಮತ್ತು ಹಿಜ್ಕೀಯ ಇವರು ಅರಸರಾಗಿದ್ದಾಗ
ಹಾಗೂ ಇಸ್ರಯೇಲ್ ನಾಡಿನಲ್ಲಿ ಯೋವಾಷನ ಮಗ ಯಾರೊಬ್ಬಾಮನು ಆಳುತ್ತಿದ್ದ ಕಾಲದಲ್ಲಿ,
ಬೆಯೇರಿಯನ ಮಗನಾದ ಹೊಶೇಯನಿಗೆ ದೇವರು ದಯಪಾಲಿಸಿದ ಸಂದೇಶವಿದು:

### ಹೊಶೇಯನ ಮಡದಿ ಮಕ್ಕಳು

2 ಸರ್ವೇಶ್ವರಸ್ವಾಮಿ ಪ್ರಥಮವಾಗಿ ಹೊಶೇಯನ ಸಂಗಡ ಮಾತನಾಡುತ್ತಾ ಆತನಿಗೆ
ಹೇಳಿದ್ದೇನೆಂದರೆ: "ನೀನು ಹೋಗಿ ವ್ಯಭಿಚಾರಿಣಿಯೊಬ್ಬಳನ್ನು ಮದುವೆ ಮಾಡಿಕೊ. ಆಕೆಗೆ
ವ್ಯಭಿಚಾರದಿಂದಾಗುವ ಮಕ್ಕಳನ್ನು ಸೇರಿಸಿಕೊ. ಏಕೆಂದರೆ, ನನ್ನ ಪ್ರಜೆ ನನ್ನನ್ನು ತೊರೆದುಬಿಟ್ಟು
ವ್ಯಭಿಚಾರದಲ್ಲಿ ಮುಳುಗಿದೆ ಎಂಬುದಕ್ಕೆ ಇದು ನಿದರ್ಶನವಾಗಿರಲಿ."

3 ಅಂತೆಯೇ ಹೊಶೇಯನು ದಿಬ್ಲಯಿಮನ ಮಗಳಾದ ಗೋಮೆರಳನ್ನು ಮದುವೆಯಾದನು.
ಅವಳು ಗರ್ಭಿಣಿಯಾಗಿ ಅವನಿಗೆ ಒಂದು ಗಂಡು ಮಗುವನ್ನು ಹೆತ್ತಳು. 4ಆಗ ಸರ್ವೇಶ್ವರ, ಹೊಶೇಯನಿಗೆ,
"ಈ ಮಗುವಿಗೆ ಜೆಸ್ರೀಲ್ ಎಂದು ಹೆಸರಿಡು. ಏಕೆಂದರೆ, ಇಸ್ರಯೇಲ್‌ನಲ್ಲಿ ಹರಿಸಿದ ರಕ್ತಪಾತಕ್ಕೆ ಪ್ರತಿಯಾಗಿ
ಸ್ವಲ್ಪಕಾಲದಲ್ಲೆ ಯೇಹುವಿನ ಮನೆತನವನ್ನು ದಂಡಿಸುವೆನು; ಇಸ್ರಯೇಲ್ ರಾಜ್ಯವನ್ನು ಅಂತ್ಯಗೊಳಿಸುವೆನು.
5ಅಷ್ಟೇ ಅಲ್ಲ, ಅಂದೇ ಜೆಸ್ರೀಲಿನ ಕಣಿವೆಯಲ್ಲಿ ಇಸ್ರಯೇಲಿನ ಬಿಲ್ಲುಶಕ್ತಿಯನ್ನು ಮುರಿದುಬಿಡುವೆನು,"
ಎಂದರು.

6 ಗೋಮೆರಳು ಪುನಃ ಗರ್ಭಿಣಿಯಾಗಿ ಒಂದು ಹೆಣ್ಣುಮಗುವನ್ನು ಹೆತ್ತಳು. ಆಗ ಸರ್ವೇಶ್ವರ,
ಹೊಶೇಯನಿಗೆ: "ಇವಳನ್ನು 'ಲೋರುಹಾಮ' ಎಂದು ಕರೆ. ಏಕೆಂದರೆ, ನಾನು ಇನ್ನು ಇಸ್ರಯೇಲರನ್ನು
ಪ್ರೀತಿಸೆನು; ಇನ್ನು ಅವರನ್ನು ಕ್ಷಮಿಸೆನು. 7ಆದರೆ ಯೆಹೂದ್ಯ ಮನೆತನವನ್ನು ಪ್ರೀತಿಸಿ ಉದ್ಧರಿಸುವೆನು.
ಬಿಲ್ಲುಬಾಣ, ಕತ್ತಿಕಾಳಗ, ಕುದುರೆರಾಹುತರು ಇವುಗಳಿಂದಲ್ಲ, ದೇವರಾದ ಸರ್ವೇಶ್ವರನ ಶಕ್ತಿಯಿಂದಲೇ
ಅವರನ್ನು ರಕ್ಷಿಸುವೆನು," ಎಂದರು.

8 ಮಗುವು ಮೊಲೆಬಿಟ್ಟ ನಂತರ ಗೋಮೆರಳು ಪುನಃ ಗರ್ಭಿಣಿಯಾಗಿ ಗಂಡು ಮಗುವನ್ನು ಹೆತ್ತಳು.
9ಆಗ ಸರ್ವೇಶ್ವರ: "ಈ ಮಗುವಿಗೆ 'ಲೋ-ಅಮ್ಮಿ' ಎಂದು ನಾಮಕರಣ ಮಾಡು. ಏಕೆಂದರೆ ಇನ್ನು ನೀವು
ನನ್ನ ಪ್ರಜೆಯಲ್ಲ; ನಾನು ನಿಮ್ಮ ದೇವರಲ್ಲ," ಎಂದರು.

### ಕಡಲತೀರದ ಮರಳಿನಂತೆ

10 ಆದರೂ ಇಸ್ರಯೇಲ್ ಜನಾಂಗ ಅಳೆಯುವುದಕ್ಕೂ ಎಣಿಸುವುದಕ್ಕೂ ಅಸಾಧ್ಯವಾದ
ಕಡಲತೀರದ ಮರಳಿನಂತಾಗುವುದು. ದೇವರು ಅವರಿಗೆ ಇಂದು, "ನೀವು ನನ್ನ ಪ್ರಜೆಯಲ್ಲ" ಎಂದಿದ್ದಾರೆ;
ಆದರೂ, "ನೀವು ಜೀವಸ್ವರೂಪಿಯಾದ ದೇವರ ಮಕ್ಕಳು" ಎನಿಸಿಕೊಳ್ಳುವ ದಿನ ಬರುವುದು. 11ಯೆಹೂದ್ಯ
ಜನರೂ ಇಸ್ರಯೇಲಿನ ಜನರೂ ಪುನಃ ಒಂದುಗೂಡುವರು. ಒಬ್ಬನೇ ಅಧಿಪತಿಯನ್ನು ಆರಿಸಿಕೊಳ್ಳುವರು.
ಅವರೆಲ್ಲರೂ ನಾನಾ ದೇಶಗಳಿಂದ ಹೊರಟುಬರುವರು. ಜೆಸ್ರೀಲಿನ ಆ ದಿನವು ಮಹತ್ತಾದುದು.

**2** ನಿಮ್ಮ ಸಹೋದರರನ್ನು 'ನಮ್ಮವರೇ' ಎಂದೂ ನಿಮ್ಮ ಸಹೋದರಿಯರನ್ನು 'ಪ್ರೀತಿಪಾತ್ರರೇ' ಎಂದೂ
ಸಂಭೋಧಿಸಿರಿ.

### "ಹಳೆಯ ಗಂಡನ ಪಾದವೇ ಗತಿ"

2 ಮಕ್ಕಳೇ, ವಾದಿಸಿರಿ; ನಿಮ್ಮ ತಾಯಿಯೊಡನೆ ವಾದಿಸಿರಿ. ಅವಳು ನನ್ನ ಪತ್ನಿಯಲ್ಲ, ನಾನು ಅವಳ
ಪತಿಯಲ್ಲ. ತನ್ನ ಮುಖದಿಂದ ವೇಶ್ಯಾಚಾರದ ಸೋಗನ್ನೂ ಸ್ತನಮಧ್ಯದಿಂದ ವ್ಯಭಿಚಾರದ ಬೆಡಗನ್ನೂ
ತ್ಯಜಿಸಲಿ. 3ಇಲ್ಲವಾದರೆ ಅವಳನ್ನು ನಗ್ನವಾಗಿಸಿ (ಹುಟ್ಟಿದಾಗ ಇದ್ದಂತೆ) ಬೆತ್ತಲೆಯಾಗಿ ನಿಲ್ಲಿಸುವೆನು.
ಅವಳನ್ನು ಬೆಂಗಾಡನ್ನಾಗಿ ಮಾಡಿ, ಮರುಭೂಮಿಯಂತೆ ಮಾರ್ಪಡಿಸಿ, ನೀರಡಿಕೆಯಿಂದ ಸಾಯುವಂತೆ

ಮಾಡುವೆನು. 4ಅವಳ ಮಕ್ಕಳಿಗೂ ಕರುಣೆಯನ್ನು ತೋರಿಸೆನು; ಅವರು ವ್ಯಭಿಚಾರದಿಂದ ಹುಟ್ಟಿದವರು.
5ಅವರ ತಾಯಿ ವೇಶ್ಯೆಯಾಗಿದ್ದಾಳೆ; ಲಜ್ಜೆಗೆಟ್ಟ ಹೆಂಗಸಾಗಿ ವರ್ತಿಸಿದ್ದಾಳೆ. 'ನನಗೆ ಅನ್ನಪಾನ, ಉಣ್ಣೆ ಉಡಿಗೆ, ಎಣ್ಣೆತೈಲ, ಪಾಯಸಪಾನಕಗಳನ್ನು ಕೊಡುವಂಥ ನಲ್ಲರ ಹಿಂದೆ ಹೋಗುವೆನು' ಎಂದುಕೊಂಡಿದ್ದಾಳೆ.

6 ಆದುದರಿಂದ ನಾನು ಅವಳ ದಾರಿಗೆ ಮುಳ್ಳುಬೇಲಿಹಾಕುವೆನು. ಇಷ್ಟಬಂದ ದಾರಿಯನ್ನು ಹಿಡಿಯದಂತೆ ಅವಳ ಮುಂದೆ ಅಡ್ಡಗೋಡೆಯನ್ನು ಎಬ್ಬಿಸುವೆನು.
7ಅವಳು ತನ್ನ ನಲ್ಲರನ್ನು ಹಿಂದಟ್ಟಿ ಹೋದರೂ ಅವರನ್ನು ಸಂಧಿಸಲಾರಳು; ಅವರನ್ನು ಹುಡುಕಿದರೂ ಕಂಡು ಹಿಡಿಯಲಾರಳು. ಆಗ ಅವಳು: 'ನನ್ನನ್ನು ಮದುವೆಯಾದ ಪತಿಯ ಬಳಿಗೆ ಹಿಂತಿರುಗುವೆನು. ಈಗಿನ ಸ್ಥಿತಿಗಿಂತ ಆಗಿನ ಸ್ಥಿತಿಯೇ ಉತ್ತಮವಾಗಿತ್ತು' ಎಂದುಕೊಳ್ಳುವಳು.

8 ಅವಳಿಗೆ ದವಸಧಾನ್ಯ, ದ್ರಾಕ್ಷಾರಸ, ತೈಲಗಳನ್ನು ಕೊಟ್ಟವನು ನಾನೇ ಎಂಬುದನ್ನು ಅರಿತುಕೊಳ್ಳದೆ ಹೋದಳು. ನಾನು ಧಾರಾಳವಾಗಿ ಕೊಟ್ಟ ಬೆಳ್ಳಿ ಬಂಗಾರಗಳನ್ನು ಬಾಳನ ಪೂಜೆಗೆ ಉಪಯೋಗಿಸಿದಳು.
9ಆದಕಾರಣ ನಾನು ದವಸ ಧಾನ್ಯ, ದ್ರಾಕ್ಷಾರಸಗಳನ್ನು ಆಯಾ ಕಾಲದಲ್ಲಿ ಹಿಂದಕ್ಕೆ ತೆಗೆದುಕೊಳ್ಳುವೆನು. ಅವಳ ಮಾನವನ್ನು ಮುಚ್ಚುತ್ತಿದ್ದ ಉಣ್ಣೆಉಡಿಗೆಗಳನ್ನು ಹಿಂತೆಗೆದುಕೊಳ್ಳುವೆನು.
10ಅವಳ ನಲ್ಲರ ಕಣ್ಣೆದುರಿಗೆ ಅವಳ ಲಜ್ಜೆಗೇಡಿತನವನ್ನು ಬಯಲುಮಾಡುವೆನು. ಅವಳನ್ನು ನನ್ನ ಕೈಯಿಂದ ಯಾರೂ ಬಿಡಿಸರು.
11ಅವಳ ಸಂಭ್ರಮಗಳನ್ನು – ಹಬ್ಬ ಹುಣ್ಣಿಮೆ, ಸಬ್ಬತ್ ಆಚರಣೆ, ಸಭೆಸಮಾರಂಭಗಳು – ಇವೆಲ್ಲವನ್ನೂ ನಿಲ್ಲಿಸಿಬಿಡುವೆನು.
12 'ನನ್ನ ನಲ್ಲರು ನನಗೆ ಉಡುಗೊರೆಯಾಗಿ ಕೊಟ್ಟವುಗಳು' ಎಂದು ಅವಳು ಹೇಳಿಕೊಳ್ಳುವ ದ್ರಾಕ್ಷಾಲತೆಗಳನ್ನೂ ಅಂಜೂರದ ವೃಕ್ಷಗಳನ್ನೂ ನಾಶಪಡಿಸುವೆನು. ಅವುಗಳನ್ನು ಕಾಡುಪೊದೆಗಳನ್ನಾಗಿ ಮಾರ್ಪಡಿಸುವೆನು. ಕಾಡುಮೃಗಗಳು ಅವುಗಳನ್ನು ಕಬಳಿಸುವುವು.
13ಅವಳು ನನ್ನನ್ನು ಮರೆತು ಬಿಟ್ಟಿದ್ದಾಳೆ; ಬಂಗಾರದ ಮೂಗುತಿ ಮುಂತಾದ ಒಡವೆಗಳಿಂದ ಶೃಂಗರಿಸಿಕೊಂಡು ನಲ್ಲರನ್ನು ವರಿಸುತ್ತಾ ಹೋಗಿದ್ದಾಳೆ. ಅಷ್ಟೇ ಅಲ್ಲ, ಬಾಳ್‍ದೇವತೆಗಳ ಹಬ್ಬದಲ್ಲಿ ಧೂಪಾರತಿಯನ್ನು ಬೆಳಗಿದ್ದಾಳೆ. ಈ ಕಾರಣ ನಾನು ಅವಳನ್ನು ದಂಡಿಸುವೆನು. ಇದು ಸರ್ವೇಶ್ವರಸ್ವಾಮಿಯ ನುಡಿ.

**ಪುನರ್ಮಿಲನ**

14 ಆದುದರಿಂದ ಇಗೋ, ನಾನು ಅವಳನ್ನು ಪುನಃ ಬೆಂಗಾಡಿಗೆ ಕರೆದೊಯ್ಯುವೆನು. ಹೃದಯಂಗಮವಾಗಿ ಅವಳನ್ನು ಒಲಿಸಿಕೊಂಡು ಮಾತಾಡುವೆನು.
15ಅವಳ ದ್ರಾಕ್ಷಾತೋಟಗಳನ್ನು ಅಲ್ಲಿಯೇ ಅವಳಿಗೆ ಹಿಂದಿರುಗಿಕೊಡುವೆನು. ಆಕೋರಿನ ಕಣಿವೆಯನ್ನು ಅವಳ ಆಶಾದ್ವಾರವನ್ನಾಗಿ ಮಾಡುವೆನು. ಅವಳು ತನ್ನ ಯೌವನದ ದಿನಗಳಲ್ಲಿಯೂ ಈಜಿಪ್ಟಿನಿಂದ ಬಿಡುಗಡೆಯಾಗಿ ಬಂದ ಸಮಯದಲ್ಲಿಯೂ ಇದ್ದಂತೆ ಅಲ್ಲಿ ಒಲುಮೆಯಿಂದಿರುವಳು.
16ಸರ್ವೇಶ್ವರ ಇಂತೆನ್ನುತ್ತಾರೆ: ಆ ದಿನಗಳಲ್ಲಿ ನೀನು ನನ್ನನ್ನು 'ಬಾಳ್‍ದೇವತೆ' ಎಂದು ಕರೆಯದೆ 'ನನ್ನ ಪತಿ' ಎಂದು ಕರೆಯುವೆ.
17ಬಾಳ್‍ದೇವತೆಗಳ ಹೆಸರುಗಳನ್ನು ನಿನ್ನ ಬಾಯಿಂದ ತೊಲಗಿಸುವೆನು; ಇನ್ನೆಂದಿಗೂ ಅವುಗಳನ್ನು ನೀನು ಉಚ್ಚರಿಸದಂತೆ ಮಾಡುವೆನು.

18 ಆ ದಿನಗಳಲ್ಲಿ ನನ್ನ ಜನರಿಗೆ ಹಾನಿ ಮಾಡದಂತೆ ಕಾಡಿನ ಮೃಗಗಳೊಂದಿಗೂ, ಆಕಾಶದ ಪಕ್ಷಿಗಳೊಂದಿಗೂ, ನೆಲದ ಮೇಲೆ ಹರಿದಾಡುವ ಕ್ರಿಮಿಕೀಟಗಳೊಂದಿಗೂ ಒಪ್ಪಂದ ಮಾಡಿಕೊಳ್ಳುವೆನು. ಬಿಲ್ಲುಬಾಣ, ಕತ್ತಿಕಠಾರಿಗಳು ಅವರ ನಾಡಿನಲ್ಲಿ ಇಲ್ಲದಂತೆ ಮಾಡುವೆನು; ನನ್ನ ಜನರು ಸುರಕ್ಷಿತವಾಗಿ ನೆಲಸುವಂತೆ ಮಾಡುವೆನು.

19 ನನ್ನವಳನ್ನಾಗಿ ಮಾಡಿಕೊಳ್ಳುವೆನು ನಿನ್ನನ್ನು ಅನವರತ
ನಿನ್ನ ವರಿಸುವೆನು ಕರುಣೆಯಿಂದ,
ನೀತಿನ್ಯಾಯದಿಂದ, ನಿಶ್ಚಲ ಪ್ರೀತಿಯಿಂದ.
20 ನಂಬಿಕೆಯಿಂದ ಸ್ವೀಕರಿಸುವೆನು ನಿನ್ನನು
ಆಗ ನೀ ಅರಿತುಕೊಳ್ಳುವೆ ಸರ್ವೇಶ್ವರನಾದ ನನ್ನನು.
21 ಸರ್ವೇಶ್ವರ ಇಂತೆನ್ನುತ್ತಾರೆ:
ಆ ದಿನದಂದು ಪ್ರೀತಿಸುವೆನು ನಿನ್ನನು;

ಆಲಿಸುವೆನು ಆಗಸದ ಮೊರೆಯನು.
22 ಆಗಸವು ಆಲಿಸುವುದು ಭೂಮಿಯ
ಮೊರೆಯನು
ಇವು ಆಲಿಸುವುವು ಇಸ್ರಯೇಲಿನ ಮೊರೆಯನು.
23 ನನ್ನ ನಾಮದ ಪ್ರಯುಕ್ತವೇ,
ಮಾಡುವೆನು ಇಸ್ರಯೇಲ್ ಏಳಿಗೆಯಾಗುವಂತೆ
ಜಗದೊಳಗೆ
ತೋರಿಸುವೆನು ಪ್ರೀತಿವಾತ್ಸಲ್ಯವನ್ನು
ಲೋರುಹಾಮಳಿಗೆ
ಹೇಳುವೆನು 'ನೀನು ನನ್ನ ಪ್ರಜೆ'ಯೆಂದು
ಲೋಅಮ್ಮಿಗೆ
ಭಜಿಸುವರವರು 'ನೀವೇ ನಮ್ಮ ದೇವರು'
ಎಂದು ನನಗೆ.

## ಪತಿದ್ರೋಹಿಯೊಡನೆ ಹೊಶೇಯ

**3** ಅನಂತರ ಸರ್ವೇಶ್ವರ ನನಗೆ ಹೇಳಿದ್ದೇನೆಂದರೆ: "ನನ್ನ ಜನರಾದ ಇಸ್ರಯೇಲಿನವರು ಅನ್ಯದೇವತೆಗಳ ಕಡೆಗೆ ತಿರುಗಿಕೊಂಡು, ಅವುಗಳಿಗೆ ನೈವೇದ್ಯಮಾಡಿದ ಪದಾರ್ಥಗಳನ್ನು ಬಯಸುತ್ತಾರೆ. ಆದರೂ ಸರ್ವೇಶ್ವರ ಅವರನ್ನು ಪ್ರೀತಿಸುತ್ತಾರೆ. ಇದಕ್ಕೆ ನಿದರ್ಶನವಾಗಿ, ನೀನು ಹೋಗಿ, ಜಾರನಿಗೆ ಪ್ರಿಯಳೂ ಮತ್ತು ವ್ಯಭಿಚಾರಿಣಿಯೂ ಆದ ಸ್ತ್ರೀಯೊರ್ವಳನ್ನು ಪ್ರೀತಿಸು."

2 ಅಂತೆಯೇ ನಾನು ಹದಿನೈದು ಬೆಳ್ಳಿನಾಣ್ಯಗಳು ಮತ್ತು 150 ಕಿಲೋ ಗ್ರಾಂ. ಜವೆಗೋದಿಯನ್ನು ಕೊಟ್ಟು, ಅಂಥವಳನ್ನು ನನಗಾಗಿ ಕೊಂಡುಕೊಂಡೆನು. 3ಆಮೇಲೆ ಅವಳಿಗೆ: "ದೀರ್ಘಕಾಲ ನನ್ನವಳಾಗಿ ಜೀವಿಸು. ಇನ್ನು ಮುಂದೆ ವ್ಯಭಿಚಾರ ಮಾಡಬೇಡ. ಇತರರ ಸಹವಾಸ ನಿನಗೆ ಬೇಡ. ನಾನು ಸಹ ಅದರಂತೆಯೇ ನಿನ್ನವನಾಗಿ ಜೀವಿಸುವೆನು," ಎಂದೆನು.

4 ಹೀಗಿರಲು, ಅನೇಕ ದಿನಗಳವರೆಗೆ ಇಸ್ರಯೇಲಿನಲ್ಲಿ ರಾಜಯುವರಾಜರುಗಳು ಆಳ್ವಿಕೆ ನಡೆಸುವುದಿಲ್ಲ. ಬಲಿಯರ್ಪಣೆಗಳು ಇರುವುದಿಲ್ಲ, ವಿಗ್ರಹವೇದಿಕೆಗಳು ಅವರ ಮಧ್ಯೆ ಕಂಡುಬರುವುದಿಲ್ಲ, ಮಾಟಮಂತ್ರ ನಡೆಯುವುದಿಲ್ಲ. 5ತದನಂತರ ಇಸ್ರಯೇಲಿನವರು ತಮ್ಮ ದೇವರಾದ ಸರ್ವೇಶ್ವರನನ್ನು ಮತ್ತು ಅರಸ ದಾವೀದನನ್ನು ಆಶ್ರಯಿಸುವರು. ಅಂತಿಮ ದಿನಗಳಲ್ಲಿ ಅವರು ಭಯಭಕ್ತಿಯುಳ್ಳವರಾಗಿ ಸರ್ವೇಶ್ವರ ಸ್ವಾಮಿಯನ್ನೂ ಅವರ ಕೃಪಾಶ್ರಯವನ್ನೂ ಮರೆಹೋಗುವರು.

## ಭಕ್ತಿಹೀನ ಜನತೆ

**4** ಇಸ್ರಯೇಲಿನವರೇ, ಸರ್ವೇಶ್ವರಸ್ವಾಮಿಯ ವಾಕ್ಯವನ್ನು ಆಲಿಸಿರಿ: "ಈ ದೇಶದಲ್ಲಿ ಸತ್ಯ, ಪ್ರೀತಿ, ಭಕ್ತಿ ಎಂಬುದೇ ಇಲ್ಲ. ಇಲ್ಲಿನ ನಿವಾಸಿಗಳ ಮೇಲೆ ಸರ್ವೇಶ್ವರ ಅಪಾದನೆ ಹೊರಿಸಿದ್ದಾರೆ. 2ಸುಳ್ಳುಸಾಕ್ಷಿ, ನರಹತ್ಯೆ, ಕಳ್ಳತನ, ವ್ಯಭಿಚಾರ ಇವೆಲ್ಲ ತುಂಬಿಕೊಂಡಿವೆ; ದೊಂಬಿದಾಂಧಲೆಗಳು ನಡೆಯುತ್ತಿವೆ, ನಾಡೆಲ್ಲ ರಕ್ತಮಯವಾಗಿದೆ. 3ಇದರಿಂದ ನಾಡು ಶೋಕ ಸಾಗರದಲ್ಲಿ ಮುಳುಗಿದೆ. ಅದರ ನಿವಾಸಿಗಳೆಲ್ಲ ನರಳುತ್ತಿದ್ದಾರೆ. ನೆಲದ ಮೇಲಿನ ಜಂತುಗಳು, ಆಕಾಶದ ಪಕ್ಷಿಗಳು ಬಳಲುತ್ತಿವೆ. ಜಲಜಂತುಗಳು ಸಹ ನಶಿಸಿಹೋಗುತ್ತಿವೆ.

**ಯಾಜಕರ ಮೇಲೆ ಆಪಾದನೆ**

4 “ಯಾರೂ ಪ್ರತಿಭಟಿಸದಿರಲಿ, ಯಾರೂ ಜನರನ್ನು ಖಂಡಿಸದಿರಲಿ. ನನ್ನ ಆಪಾದನೆ ಇರುವುದು, ಎಲೈ ಯಾಜಕರೇ, ನಿಮ್ಮ ಮೇಲೆಯೇ.
5ಹಗಲಿನಲ್ಲೇ ನೀವು ಮುಗ್ಗರಿಸುತ್ತೀರಿ. ರಾತ್ರಿಯಲ್ಲಿ ಪ್ರವಾದಿಗಳು ಸಹ ನಿಮ್ಮೊಂದಿಗೆ ಮುಗ್ಗರಿಸುತ್ತಾರೆ. ನಿಮ್ಮ ವಂಶವೃಕ್ಷವನ್ನೇ ನಾನು ನಿರ್ಮೂಲಮಾಡುವೆನು.
6ಜನರು ಜ್ಞಾನಹೀನರಾಗಿ ಅಳಿದುಹೋಗುತ್ತಿದ್ದಾರೆ.

“ನೀವು ದೈವಜ್ಞಾನವನ್ನು ತಿರಸ್ಕರಿಸಿದ್ದೀರಿ; ನಾನು ಸಹ ಯಾಜಕವರ್ಗದಿಂದ ನಿಮ್ಮನ್ನು ವರ್ಜಿಸಿಬಿಡುತ್ತೇನೆ. ನೀವು ದೇವರ ಧರ್ಮೋಪದೇಶವನ್ನು ಮರೆತುಬಿಟ್ಟಿದ್ದೀರಿ; ನಾನು ನಿಮ್ಮ ಮಕ್ಕಳನ್ನು ಮರೆತುಬಿಡುತ್ತೇನೆ.

7 “ಅವರ ಸಂತಾನ ಹೆಚ್ಚಿದ ಹಾಗೆಲ್ಲ ಅವರು ನನ್ನ ವಿರುದ್ಧ ಪಾಪಮಾಡುತ್ತಾ ಬಂದಿದ್ದಾರೆ. ಅವರ ಮಾನವನ್ನು ಅವಮಾನವನ್ನಾಗಿ ಮಾರ್ಪಡಿಸುತ್ತೇನೆ.
8ನನ್ನ ಜನರ ಪಾಪವೇ ಅವರಿಗೆ ಜೀವನಾಧಾರ. ಎಂತಲೇ ಅವರು ಪಾಪ ಕೃತ್ಯಗಳನ್ನೇ ಅಧಿಕವಾಗಿ ಬಯಸುತ್ತಾರೆ.
9ಪ್ರಜೆಗಳಂತೆಯೇ ಯಾಜಕ. ನಿಮ್ಮ ದುಷ್ಕೃತ್ಯಗಳಿಗೆ ತಕ್ಕ ದಂಡನೆಯನ್ನು ವಿಧಿಸುತ್ತೇನೆ. ಅವುಗಳ ಪ್ರತಿಫಲವನ್ನು ನೀವೇ ಅನುಭವಿಸುವಂತೆ ಮಾಡುತ್ತೇನೆ.
10ಎಷ್ಟು ತಿಂದರೂ ನಿಮಗೆ ತೃಪ್ತಿಯಾಗದು. ಎಷ್ಟು ವ್ಯಭಿಚಾರಗೈದರೂ ನಿಮಗೆ ಸಂತಾನ ಪ್ರಾಪ್ತಿಯಾಗದು. ಕಾರಣ, ನೀವು ವೇಶ್ಯಾಚಾರಕ್ಕಾಗಿ ಸರ್ವೇಶ್ವರನನ್ನೇ ತಿರಸ್ಕರಿಸಿದ್ದೀರಿ.

**ಮತಿಹೀನರು ಗತಿಸಿಹೋಗುವರು**

11 “ಮದ್ಯಪಾನ, ದ್ರಾಕ್ಷಾರಸ – ಇವು ಜನರನ್ನು ಬುದ್ಧಿಹೀನರನ್ನಾಗಿ ಮಾಡುತ್ತವೆ.
12ನನ್ನ ಜನರು ಮರದ ತುಂಡನ್ನು ಹಿಡಿದು ಕಣಿ ಕೇಳುತ್ತಾರೆ; ಕೈಯಲ್ಲಿ ಹಿಡಿದ ದೊಣ್ಣೆಯಿಂದ ವಿವೇಕ ವಾಣಿಯನ್ನು ಪಡೆಯಲೆತ್ನಿಸುತ್ತಾರೆ. ವ್ಯಭಿಚಾರ ಗುಣ ಅವರನ್ನು ತಪ್ಪುದಾರಿಗೆ ಎಳೆದಿದೆ. ದೇವರ ಸದ್ಭಕ್ತಿಯನ್ನು ತೊರೆದು ಅವರು ಧರ್ಮಭ್ರಷ್ಠರಾಗಿದ್ದಾರೆ.
13ಅವರು ಗಿರಿಶಿಖರಗಳ ಮೇಲೆ ಬಲಿಯನರ್ಪಿಸುತ್ತಾರೆ. ಬೆಟ್ಟಗುಡ್ಡಗಳ ಮೇಲೆ ಧೂಪ ಹಾಕುತ್ತಾರೆ. ದಟ್ಟ ನೆರಳಿನ ಅಲ್ಲೋನ್, ಲಿಬ್ನೆ, ಏಲಾ ವೃಕ್ಷಗಳ ಅಡಿಯಲ್ಲಿ ಇಂತಹುದನ್ನೆಲ್ಲ ಮಾಡುತ್ತಾರೆ. ಹೀಗಿರಲು ನಿಮ್ಮ ಪುತ್ರಿಯರು ಸೂಳೆಯರಾಗುವರು. ನಿಮ್ಮ ಸೊಸೆಗಳು ವ್ಯಭಿಚಾರಿಣಿಗಳಾಗುವರು. ಇದರಲ್ಲಿ ಆಶ್ಚರ್ಯವೇನಿಲ್ಲ.
14ಸೂಳೆಯರಾಗಿ ನಡೆಯುವ ಪುತ್ರಿಯರನ್ನು ನಾನು ದಂಡಿಸುವುದಿಲ್ಲ, ವ್ಯಭಿಚಾರ ಮಾಡುವ ಸೊಸೆಗಳನ್ನು ನಾನು ಶಿಕ್ಷಿಸುವುದಿಲ್ಲ. ಕಾರಣ, ನೀವೇ ಸೂಳೆಯರನ್ನು ಸೇರಿಕೊಂಡು ಅಡ್ಡದಾರಿ ಹಿಡಿಯುತ್ತೀರಿ. ದೇವದಾಸಿಯರೊಂದಿಗೆ ಸೇರಿ ಬಲಿಯನ್ನು ಅರ್ಪಿಸುತ್ತೀರಿ. ‘ಮತಿಹೀನರು ಗತಿಸಿಹೋಗುವರು’ ಎಂಬ ಹೇಳಿಕೆ ಖಂಡಿತವಾಗಿ ನಿಮಗೆ ಅನ್ವಯಿಸುತ್ತದೆ.
15 “ಓ ಇಸ್ರಯೇಲ್ ನೀನು ವೇಶ್ಯೆಯಾಗಿ ನಡೆದರೂ ಜುದೇಯ ನಾಡು ಆ ದೋಷಕ್ಕೆ ಒಳಗಾಗದಿರಲಿ. ಯೆಹೂದ್ಯರೇ, ಗಿಲ್ಗಾಲಿಗೆ ಬರಬೇಡಿ. ಬೇತಾವೆನಿಗೆ ಯಾತ್ರೆಹೋಗಬೇಡಿ. ‘ಜೀವಸ್ವರೂಪನಾದ ಸರ್ವೇಶ್ವರನಾಣೆ’ ಎಂದು ಪ್ರಮಾಣ ಮಾಡಬೇಡಿ.
16ಇಸ್ರಯೇಲಿನವರು ಹತೋಟಿಗೆ ಬಾರದ ಹೋರಿಯಂತೆ ಮೊಂಡಾಗಿದ್ದಾರೆ. ಸರ್ವೇಶ್ವರ ಅವರನ್ನು ಈಗ ವಿಶಾಲವಾದ ಹುಲ್ಲುಗಾವಲುಗಳಲ್ಲಿ ಕುರಿಗಳಂತೆ ಮೇಯಿಸಲು ಸಾಧ್ಯವೇ?
17ಎಫ್ರಯಿಮ್ ವಿಗ್ರಹಗಳ ಪ್ರಭಾವಕ್ಕೆ ಒಳಗಾಗಿದೆ. ಅದನ್ನು ಅದರಷ್ಟಕ್ಕೆ ಬಿಟ್ಟುಬಿಡಿ.
18ಅವರು ಮದ್ಯಪಾನವನ್ನು ಮಾಡಿದ ನಂತರ ವ್ಯಭಿಚಾರಕ್ಕೆ ಇಳಿಯುತ್ತಾರೆ. ಮಾನಕ್ಕಿಂತ ಅವಮಾನವೇ ಅವರಿಗೆ ಅತಿ ಪ್ರಿಯ.
19ಬಿರುಗಾಳಿ ಅವರನ್ನು ಬಡಿದೆತ್ತಿಕೊಂಡು ಹೋಗುವುದು. ಅವರು ವಿಗ್ರಹಗಳಿಗೆ ಅರ್ಪಿಸುತ್ತಿದ್ದ ಬಲಿಗಳಿಗಾಗಿ ನಾಚಿಕೆಪಡುವರು.

**5** “ಯಾಜಕರೇ, ಕೇಳಿ: ಇಸ್ರಯೇಲ್ ಮನೆತನದವರೇ, ಗಮನಿಸಿ. ರಾಜ ವಂಶದವರೇ ಕಿವಿಗೊಡಿ.
2ನೀವು ಮಿಚ್ಪದಲ್ಲಿ ಉರುಲಾಗಿದ್ದೀರಿ. ತಾಬೋರಿನಲ್ಲಿ ಬಲೆಯಾಗಿದ್ದೀರಿ. ಶಿಟ್ಟಿಮಿನಲ್ಲಿ ಆಳವಾದ ಕಂದಕವನ್ನು ತೋಡಿದ್ದೀರಿ. ನಿಮ್ಮ ವಿರುದ್ಧ ತೀರ್ಪು ಬಂದಿದೆ. ನಿಮ್ಮೆಲ್ಲರನ್ನು ಶಿಕ್ಷಿಸುವೆನು.
3ಎಫ್ರಯಿಮನ್ನು ಬಲ್ಲೆನು;

ಇಸ್ರಯೇಲ್ ನನಗೆ ಕಣ್ಮರೆಯಾಗಿಲ್ಲ. ಎಫ್ರಯಿಮ್, ನೀನು ವ್ಯಭಿಚಾರಿಣಿಯಾಗಿರುವೆ. ಇಸ್ರಯೇಲ್, ನೀನು ಹೊಲಸಾಗಿರುವೆ."

**ವಿಗ್ರಹಾರಾಧನೆಯ ವಿಡಂಬನ**

4 ಅವರು ತಮ್ಮ ದೇವರ ಬಳಿಗೆ ಹಿಂದಿರುಗದಂತೆ ಅವರ ದುಷ್ಕೃತ್ಯಗಳು ಅವರಿಗೆ ಅಡ್ಡಿಯಾಗಿವೆ. ವ್ಯಭಿಚಾರ ಅವರಲ್ಲಿ ನೆಲೆಗೊಂಡಿದೆ. ಅವರು ಸರ್ವೇಶ್ವರನನ್ನು ಅರಿಯರು.
5ಇಸ್ರಯೇಲಿನ ಅಹಂಕಾರವೇ ಅದಕ್ಕೆ ವಿರುದ್ಧ ಸಾಕ್ಷಿ ನುಡಿಯುತ್ತದೆ. ಇಸ್ರಯೇಲ್ ಮತ್ತು ಎಫ್ರಯಿಮ್ ತಮ್ಮ ದುರ್ಮಾರ್ಗದಲ್ಲಿ ಮುಗ್ಗರಿಸಿ ಬೀಳುತ್ತವೆ. ಜುದೇಯವೂ ಅದರಂತೆಯೇ ಬೀಳಲಿದೆ.
6ಅವರು ತಮ್ಮ ದನಕುರಿಗಳೊಂದಿಗೆ ಸರ್ವೇಶ್ವರಸ್ವಾಮಿ ಯನ್ನು ಅರಸಿಹೋದರೂ, ಅವರನ್ನು ಕಾಣರು. ಸರ್ವೇಶ್ವರ ಅವರಿಂದ ಮರೆಯಾಗಿದ್ದಾರೆ.
7ಅವರು ವ್ಯಭಿಚಾರದಿಂದ ಸರ್ವೇಶ್ವರಸ್ವಾಮಿಗೆ ದ್ರೋಹವೆಸಗಿದ್ದಾರೆ. ಅವರ ಮಕ್ಕಳು ಆ ಸ್ವಾಮಿಯ ಮಕ್ಕಳಲ್ಲ; ಮುಂದಿನ ಅಮಾವಾಸ್ಯೆಯೊಳಗಾಗಿ ಅವರು ನಾಶವಾಗುವರು. ಅವರ ಸ್ವತ್ತೆಲ್ಲಾ ಅಳಿದು ಹೋಗುವುದು.

**ಸೋದರರ ಸಮರ**

8 ಗಿಬ್ಯದಲ್ಲಿ ತುತೂರಿಯನ್ನು ಊದಿರಿ, ರಮಾದಲ್ಲಿ ಕೊಂಬನ್ನು ಮೊಳಗಿಸಿರಿ; ಬೇತಾವೆನಿನಲ್ಲಿ ಕಾಳಗದ ಕರೆನೀಡಿರಿ. ಬೆನ್ಯಾಮಿನೇ, ನಿನ್ನನ್ನು ಬೆನ್ನಟ್ಟಿ ಬರುತ್ತಿರುವವರನ್ನು ನೋಡು.
9ದಂಡನೆಯ ದಿನದಲ್ಲಿ ಎಫ್ರಯಿಮ್ ಹಾಳಾಗುವುದು. ಇಗೋ, ಇಸ್ರಯೇಲಿನ ಕುಲಗಳ ಭವಿಷ್ಯವನ್ನು ಖಚಿತವಾಗಿ ತಿಳಿಸಿದ್ದೇನೆ:

10 "ಜುದೇಯದ ಮುಖಂಡರು, ಗಡಿದಾಟಿ ಆಕ್ರಮಣ ಮಾಡುವವರನ್ನು ಹೋಲುತ್ತಾರೆ. ಅವರ ಮೇಲೆ ನನ್ನ ಕೋಪಾಗ್ನಿಯನ್ನು ಸುರಿಸುತ್ತೇನೆ.
11ದುರಾಚಾರಗಳನ್ನು ಅನುಸರಿಸಲು ನಿರ್ಧರಿಸಿದ ಕಾರಣ, ಎಫ್ರಯಿಮ್ ನ್ಯಾಯತೀರ್ಪಿಗೆ ಗುರಿಯಾಗಿದೆ; ಹಿಂಸೆಗೀಡಾಗಿದೆ; ನುಚ್ಚುನೂರಾಗಿದೆ.
12ನಾನು ಎಫ್ರಯಿಮಿಗೆ ನುಸಿಯಾಗಿದ್ದೇನೆ; ಯೆಹೂದ್ಯಕುಲಕ್ಕೆ ಕುಟ್ಟೆಯಾಗಿದ್ದೇನೆ.

13 "ಎಫ್ರಯಿಮ್ ತನ್ನ ರೋಗವನ್ನು ಅರಿತುಕೊಂಡಿತು; ಜುದೇಯವು ತನ್ನ ಹುಣ್ಣನ್ನು ಕಂಡುಕೊಂಡಿತು. ಆಗ ಎಫ್ರಯಿಮ್ ಅಸ್ಸೀರಿಯಾದ ಕಡೆಗೆ ತಿರುಗಿಕೊಂಡು ಜಗಳಗಂಟಿಯಾದ ರಾಜನ ಬಳಿಗೆ ದೂತರನ್ನು ಕಳುಹಿಸಿತು. ಆದರೆ ಅವನು ನಿಮ್ಮ ರೋಗವನ್ನು ವಾಸಿಮಾಡಲಾರನು, ನಿಮ್ಮ ಹುಣ್ಣನ್ನು ಗುಣಪಡಿಸಲಾರನು.
14ಎಫ್ರಯಿಮಿಗೆ ನಾನು ಸಿಂಹ; ಯೆಹೂದ್ಯಕುಲಕ್ಕೆ ಪ್ರಾಯದ ಸಿಂಹ; ಅದನ್ನು ಸೀಳಿಬಿಡುವೆನು; ಎಳೆದುಕೊಂಡು ಹೋಗುವೆನು; ಯಾರೂ ಅದನ್ನು ನನ್ನಿಂದ ಬಿಡಿಸಿಕೊಳ್ಳಲಾರರು.

15 "ನಾನು ನನ್ನ ನಿವಾಸಕ್ಕೆ ಹಿಂದಿರುಗುವೆನು. ನನ್ನ ಜನರು ತಮ್ಮ ದೋಷಫಲವನ್ನು ಅನುಭವಿಸಿ, ನನ್ನ ಸಾನಿಧ್ಯವನ್ನು ಹರಸುವ ತನಕ ಅಲ್ಲೇ ಇರುವೆನು. ಸಂಕಟದಲ್ಲಿ ಸಿಕ್ಕಿಕೊಂಡಾಗ, ಕೂಡಲೆ ಅವರು ನನ್ನನ್ನು ಆಶ್ರಯಿಸುವರು."

**ದುಷ್ಕೃತ್ಯಕ್ಕೆ ತಕ್ಕ ದುರ್ಭಿಕ್ಷ**

**6** ನನ್ನನ್ನು ಜನರು ಮರೆಹೋಗುತ್ತಾ ಹೀಗೆನ್ನುವರು: "ಬನ್ನಿ, ಸರ್ವೇಶ್ವರಸ್ವಾಮಿಯ ಬಳಿಗೆ ಹಿಂದಿರುಗೋಣ. ಅವರು ನಮ್ಮನ್ನು ಛಿದ್ರಗೊಳಿಸಿದವರು. ಅವರು ನಮ್ಮನ್ನು ಗಾಯಗೊಳಿಸಿದ್ದಾರೆ; ಅವರೇ ನಮ್ಮ ಗಾಯಗಳನ್ನು ಕಟ್ಟಿ ಗುಣಪಡಿಸುವರು. ಒಂದೆರಡು ದಿನಗಳ ನಂತರ ಅವರು ನಮ್ಮನ್ನು ಬದುಕಿಸುವರು.
2ಮೂರನೆಯ ದಿನದಲ್ಲಿ ಅವರು ನಮ್ಮನ್ನು ಎಬ್ಬಿಸುವರು. ಆಗ ನಾವು ಅವರ ಸನ್ನಿಧಿಯಲ್ಲಿ ಬಾಳುವೆವು.
3ನಿರಂತರವಾಗಿ ಹುಡುಕಿ ಅವರನ್ನು ಕಂಡುಕೊಳ್ಳೋಣ; ಸರ್ವೇಶ್ವರಸ್ವಾಮಿಯನ್ನು ಅರಿತುಕೊಳ್ಳೋಣ; ಅವರ ಆಗಮನ ಸೂರ್ಯೋದಯದಂತೆ ನಿಶ್ಚಯ. ಭೂಮಿಯನ್ನು ತಣಿಸುವ ಮುಂಗಾರು ಹಿಂಗಾರು ಮಳೆಗಳಂತೆ ಅವರು ನಮ್ಮ ಬಳಿಗೆ ಬಂದೇ ಬರುವರು.

4 ಆದರೆ ಸರ್ವೇಶ್ವರ ಹೇಳುವುದೇನೆಂದರೆ: “ಎಫ್ರಯಿಮೇ, ನಾನು ನಿನ್ನನ್ನು ಹೇಗೆ ತಿದ್ದಲಿ? ಜುದೇಯವೇ, ನಿನ್ನನ್ನು ಹೇಗೆ ಸರಿಪಡಿಸಲಿ? ನಿಮ್ಮ ಭಕ್ತಿ ಪ್ರಾತಃಕಾಲದ ಮೋಡದಂತಿದೆ; ಬೇಗನೆ ಮಾಯವಾಗುವ ಇಬ್ಬನಿಯಂತಿದೆ.
5ಖಂಡ ತುಂಡವಾದ ತೀರ್ಪುನೀಡುವ, ಕತ್ತಿಯಂತೆ ಹರಿತವಾಗಿ ಮಾತನಾಡುವ ನನ್ನ ಪ್ರವಾದಿಗಳನ್ನು ನಿಮ್ಮ ಬಳಿಗೆ ಕಳುಹಿಸಿದ್ದೇನೆ. ನನ್ನ ನ್ಯಾಯ ದಂಡನೆ ಮಿಂಚಿನಂತೆ ಹೊರಡುವುದು.
6ನನಗೆ ಬೇಕಾದುದು ಕರುಣೆ, ಬಲಿಯರ್ಪಣೆಯಲ್ಲ; ನನಗೆ ಬೇಕಾದುದು ದೈವಜ್ಞಾನ, ದಹನಬಲಿ ದಾನವಲ್ಲ.

7 “ಆದಾಮನಂತೆ ಅವರು ನನ್ನ ಒಡಂಬಡಿಕೆಯನ್ನು ಉಲ್ಲಂಘಿಸಿದ್ದಾರೆ. ಅವನಂತೆ ಅವರು ನನಗೆ ದ್ರೋಹವೆಸಗಿದ್ದಾರೆ.
8ಗಿಲ್ಯಾದು ದುಷ್ಟ ಜನರಿಂದ ತುಂಬಿದೆ. ಅವರು ತುಳಿಯುವ ಹಾದಿಗಳಲ್ಲೆಲ್ಲ ರಕ್ತಕಲೆಗಳೇ.
9ದರೋಡೆಗಾರರು ದಾರಿಹೋಕರಿಗಾಗಿ ಹೊಂಚುಹಾಕುವಂತೆ ಯಾಜಕರು ಗುಂಪುಗೂಡಿ ಹೊಂಚುಹಾಕುತ್ತಾ, ಶೆಖೆಮಿಗೆ ಯಾತ್ರೆಹೋಗುವವರನ್ನು ಕೊಂದು ಹಾಕುತ್ತಾರೆ. ಅವರು ಮಾಡುವುದು ನಿಜಕ್ಕೂ ಘೋರಕೃತ್ಯ.
10ಇಸ್ರಯೇಲ್ ಮನೆತನದಲ್ಲಿ ಘೋರಕೃತ್ಯಗಳು ಕಾಣಿಸಿಕೊಂಡಿವೆ. ಅಲ್ಲಿ ಎಫ್ರಯಿಮಿನೊಳಗೆ ವೇಶ್ಯಾಚಾರ ನಡೆಯುತ್ತಿದೆ. ಇಸ್ರಯೇಲ್ ಕಲುಷಿತವಾಗಿದೆ.

11 “ಜುದೇಯವೇ, ನೀನು ಮಾಡುವ ದುಷ್ಕೃತ್ಯಗಳಿಗೆ ತಕ್ಕ ಸುಗ್ಗಿ ಕಾದಿದೆ.

# 7

“ನಾನು ನನ್ನ ಜನರ ದುರವಸ್ಥೆಯನ್ನು ನೀಗಿಸಿ ಇಸ್ರಯೇಲನ್ನು ಸ್ವಸ್ಥಗೊಳಿಸಬೇಕೆಂದಿರುವಾಗ ಎಫ್ರಯಿಮಿನ ಅಕ್ರಮ ಮತ್ತು ಸಮಾರ್ಯದ ದುಷ್ಟತನ ಬಯಲಿಗೆ ಬರುತ್ತವೆ. ಅವರು ಒಬ್ಬರಿಗೊಬ್ಬರು ಮೋಸಮಾಡುತ್ತಾರೆ. ಕಳ್ಳರಂತೆ ನುಗ್ಗಿ ಕನ್ನಹಾಕುತ್ತಾರೆ. ದರೋಡೆಗಾರರಂತೆ ದಾರಿಯಲ್ಲೇ ಸುಲಿಗೆಮಾಡುತ್ತಾರೆ.
2ಆದರೆ ಅವರ ದುಷ್ಕೃತ್ಯಗಳೆಲ್ಲ ಸರ್ವೇಶ್ವರ ಸ್ವಾಮಿಯ ಜ್ಞಾಪಕದಲ್ಲಿ ಇರುತ್ತವೆ ಎಂಬುದನ್ನು ಅವರು ಮನದಟ್ಟು ಮಾಡಿಕೊಂಡಿಲ್ಲ. ಅವರ ನೀಚಕೃತ್ಯಗಳು ಅವರನ್ನು ಆವರಿಸಿಕೊಂಡಿವೆ; ನನ್ನ ಕಣ್ಮುಂದೆಯೇ ಇವೆ.

### ಅರಮನೆಯಲ್ಲೇ ಒಳಸಂಚು

3 “ಅವರು ಅಧರ್ಮದಿಂದ ಅರಸನನ್ನು ಆನಂದಗೊಳಿಸುತ್ತಾರೆ; ಅಸತ್ಯದಿಂದ ಅಧಿಕಾರಿಗಳನ್ನು ಸಂತೋಷಪಡಿಸುತ್ತಾರೆ.
4ಅವರೆಲ್ಲರು ವ್ಯಭಿಚಾರಿಗಳೇ; ಅವರು ಉರಿಯುವ ಒಲೆಗೆ ಸಮಾನರು. ರೊಟ್ಟಿಸುಡುವವನು ನಾದಿದ ಹಿಟ್ಟು ಹುಳಿಯಾಗುವವರೆಗೂ ಬಿಟ್ಟಿರುವ ಬೂದಿ ಮುಚ್ಚಿದ ಕೆಂಡಕ್ಕೆ ಸಮಾನರು.
5ಅರಸನ ಹಬ್ಬದ ದಿನಗಳಲ್ಲಿ ಅಧಿಕಾರಿಗಳು ದ್ರಾಕ್ಷಾರಸವನ್ನು ಕುಡಿದು ಮತ್ತರಾಗುವಂತೆ ಮಾಡಿದರು. ಅರಸನು ಅಪಹಾಸ್ಯ ಮಾಡುವ ತುಂಟರ ಸಂಗಡ ಬೆರೆತುಕೊಂಡನು.
6ಒಳಸಂಚಿನಿಂದ ಕೂಡಿದ ಅವರ ಹೃದಯ ಒಲೆಯಂತೆ ಉರಿಯುತ್ತದೆ. ಅವರ ಕೋಪಾಗ್ನಿ ರಾತ್ರಿಯೆಲ್ಲ ಹೊತ್ತಿಕೊಂಡೇ ಇರುತ್ತದೆ. ಬೆಳಗಾದದ್ದೇ ಧಗಧಗನೆ ಭುಗಿಲೇರುತ್ತದೆ.

7 “ಎಲ್ಲರು ಒಲೆಯಂತೆ ಉರಿಯುತ್ತ ತಮ್ಮ ಅಧಿಕಾರಿಗಳನ್ನೇ ನುಂಗಿಬಿಡುತ್ತಾರೆ. ಅವರ ಅರಸರೆಲ್ಲ ಸತ್ತುಬಿದ್ದಿದ್ದಾರೆ. ನನಗೆ ಮೊರೆಯಿಡುವವರು ಅವರಲ್ಲಿ ಯಾರೂ ಇಲ್ಲ.”

### ಇಸ್ರಯೇಲ್ ಮತ್ತು ಇತರ ರಾಷ್ಟ್ರಗಳು

8 “ಎಫ್ರಯಿಮ್ ಅನ್ಯರಾಷ್ಟ್ರಗಳೊಂದಿಗೆ ಬೆರೆತುಕೊಳ್ಳುತ್ತದೆ. ಅದು ತಿರುವಿಹಾಕದ ರೊಟ್ಟಿ.
9ಅನ್ಯ ಜನರು ಅದರ ಶಕ್ತಿಯನ್ನು ಹೀರಿಕೊಂಡರೂ ಅದಕ್ಕೆ ಅರಿವಿಲ್ಲ. ಅದರ ತಲೆಗೂದಲು ನೆರೆತು ಹೋದರೂ ಅದಕ್ಕೆ ಪ್ರಜ್ಞೆ ಇಲ್ಲ.
10ಇಸ್ರಯೇಲಿನ ಅಹಂಕಾರವೇ ಅದರ ವಿರುದ್ಧ ಸಾಕ್ಷಿನುಡಿಯುತ್ತದೆ. ಇಷ್ಟೆಲ್ಲ ಸಂಭವಿಸಿದರೂ ಅದು ತನ್ನ ದೇವರಾದ ಸರ್ವೇಶ್ವರಸ್ವಾಮಿಯ ಬಳಿಗೆ ಹಿಂದಿರುಗುವುದಿಲ್ಲ; ಅವರನ್ನು ಆಶ್ರಯಿಸುವುದಿಲ್ಲ.
11ಎಫ್ರಯಿಮ್ ಬುದ್ಧಿವಿವೇಕವಿಲ್ಲದ ಪಾರಿವಾಳದಂತೆ; ಅದರ ಜನರು ಈಜಿಪ್ಟನ್ನು ಸಹಾಯಕ್ಕೆ ಕರೆಯುತ್ತಾರೆ. ಅಸ್ಸೀರಿಯದ ಆಶ್ರಯಕ್ಕೆ ಓಡುತ್ತಾರೆ.
12ಅವರು ಹೋಗುವಾಗ ನನ್ನ ಬಲೆಯನ್ನು

ಅವರ ಮೇಲೆ ಬೀಸುವೆನು. ಆಕಾಶದ ಪಕ್ಷಿಗಳಂತೆ ಅವರನ್ನು ಕೆಳಕ್ಕೆ ಎಳೆದು ಬಿಡುವೆನು. ಅವರ ದುಷ್ಕೃತ್ಯಗಳಿಗನುಸಾರ ಅವರನ್ನು ದಂಡಿಸುವೆನು.

13 "ನನ್ನನ್ನು ತೊರೆದುಬಿಟ್ಟದ್ದರಿಂದ ಅವರು ಹಾಳಾಗಲಿ, ನನಗೆ ದ್ರೋಹವೆಸಗಿದ್ದರಿಂದ ಅವರು
ನಾಶವಾಗಲಿ! ನಾನು ಅವರನ್ನು ಉದ್ಧರಿಸಬೇಕೆಂದಿದ್ದರೂ ಅವರು ನನಗೆ ತಪ್ಪಾಗಿ ನಡೆದುಕೊಂಡಿದ್ದಾರೆ.
14ಅವರು ಹೃದಯ ಪೂರ್ವಕವಾಗಿ ನನಗೆ ಪ್ರಾರ್ಥನೆ ಮಾಡುವುದಿಲ್ಲ. ಬದಲಿಗೆ ಅವರ ಹಾಸಿಗೆಗಳ ಮೇಲೆ
ಬಿದ್ದು ಅರಚುತ್ತಾರೆ. ಧಾನ್ಯದ್ರಾಕ್ಷಾರಸಗಳಿಗಾಗಿ ಕಿರಿಚಿಕೊಳ್ಳುತ್ತಾರೆ. ನನಗೆ ವಿರುದ್ಧವಾಗಿ ಪ್ರತಿಭಟಿಸುತ್ತಾ ತಮ್ಮ
ದೇಹಗಳನ್ನು ಪರಚಿಕೊಳ್ಳುತ್ತಾರೆ. 15ನಾನೇ ಅವರಿಗೆ ಯುದ್ಧಾಭ್ಯಾಸ ಮಾಡಿಸಿ, ಅವರ ಭುಜಬಲವನ್ನು
ಬೆಳೆಸಿದರೂ ನನ್ನ ವಿರುದ್ಧ ಕೇಡನ್ನು ಕಲ್ಪಿಸುತ್ತಾರೆ. 16ಅವರು ಅತ್ತಿತ್ತ ತಿರುಗಿಕೊಳ್ಳುತ್ತಾರೆ. ದೇವರ ಕಡೆ
ತಿರುಗಿ ಕೊಳ್ಳುವುದಿಲ್ಲ. ಅವರು ಮೋಸದ ಬಿಲ್ಲಿಗೆ ಸಮಾನರು. ಸೊಕ್ಕಿನ ನಾಲಗೆಯ ನಿಮಿತ್ತ ಅವರ
ಮುಖಂಡರು ಹತರಾಗುವರು. ಅವರ ಪತನ ಈಜಿಪ್ಟಿಗೆ ಹಾಸ್ಯಾಸ್ಪದವಾಗುವುದು."

### ವಿಗ್ರಹಪೂಜೆಯ ಪರಿಣಾಮ

**8** "ತುತೂರಿಯನ್ನು ಎತ್ತಿಕೊಂಡು ಊದು. ಶತ್ರುಗಳು ಹದ್ದಿನಂತೆ ದೇವರ ಆಲಯದ ಮೇಲೆ
ಎರಗಿಬರುತ್ತಿದ್ದಾರೆ. ಕಾರಣ – ಜನರು ನನ್ನ ಒಡಂಬಡಿಕೆಯನ್ನು ಮೀರಿದ್ದಾರೆ, ನನ್ನ ವಿಧಿನಿಯಮಗಳನ್ನು
ಉಲ್ಲಂಘಿಸಿದ್ದಾರೆ. 2ನನ್ನನ್ನು ತಮ್ಮ ದೇವರೆಂದೂ ತಾವು ದೇವಜನರೆಂದೂ ನನ್ನನ್ನು ಅರಿತವರೆಂದೂ
ಕೂಗಿಕೊಳ್ಳುತ್ತಾರೆ. 3ಆದರೆ ಈ ಇಸ್ರಯೇಲರು ಸತ್ಯವನ್ನು ತೊರೆದು ಬಿಟ್ಟಿದ್ದಾರೆ. ಎಂತಲೇ ಶತ್ರುಗಳು
ಅವರನ್ನು ಬೆನ್ನಟ್ಟಿ ಹೋಗುವರು.

4 "ಅವರು ನನ್ನ ಅನುಮತಿ ಇಲ್ಲದೆ ಅರಸರನ್ನು ನೇಮಿಸಿಕೊಂಡಿದ್ದಾರೆ. ನನಗೆ ತಿಳಿಯದಂತೆ
ಅಧಿಪತಿಗಳನ್ನು ಮಾಡಿಕೊಂಡಿದ್ದಾರೆ. ಬೆಳ್ಳಿ ಬಂಗಾರದ ವಿಗ್ರಹಗಳನ್ನು ನಿರ್ಮಿಸಿಕೊಂಡಿದ್ದಾರೆ. ಅವರು
ಮಾಡಿರುವುದೆಲ್ಲ ಅವರ ನಾಶಕ್ಕಾಗಿಯೇ. 5ಸಮಾರಿಯವೇ, ನೀನು ನಿರ್ಮಿಸಿಕೊಂಡಿರುವ ಬಸವನನ್ನು
ಧಿಕ್ಕರಿಸಿದ್ದೇನೆ. ನನ್ನ ಕೋಪಾಗ್ನಿ ನಿನ್ನ ಮೇಲೆ ಉರಿದುಬರುತ್ತಿದೆ. ಈ ಜನರು ನಿರ್ಮಲರಾಗುವುದಕ್ಕೆ ಇನ್ನೆಷ್ಟು
ಕಾಲ ಹಿಡಿಯುವುದೋ? 6ಆ ಬಸವ ಇಸ್ರಯೇಲಿನ ಕೈಕೆಲಸವೇ. ಶಿಲ್ಪಿ ಕೊಟ್ಟ ರೂಪವದು; ಅದು
ದೇವರಲ್ಲ. ಸಮಾರ್ಯದ ಬಸವನು ನುಚ್ಚು ನೂರಾಗುವನು. 7ಇವರು ಗಾಳಿಯನ್ನು ಬಿತ್ತುತ್ತಾರೆ;
ಬಿರುಗಾಳಿಯನ್ನು ಕೊಯ್ಯುತ್ತಾರೆ. ಅವರ ಪೈರು ತೆನೆಗೆ ಬಾರದು. ಕಾಳು ಮೊಳೆತರೂ ಕೂಳು ದೊರಕದು.
ಒಂದು ವೇಳೆ ದೊರಕಿದರೂ ಅನ್ಯ ಜನರು ಅದನ್ನು ಕಬಳಿಸಿಬಿಡುವರು. 8ಇಸ್ರಯೇಲನ್ನು ಕಬಳಿಸಲಾಗಿದೆ.
ಈಗದು ಅನ್ಯ ಜನಾಂಗಗಳ ಮಧ್ಯೆ ಯಾರಿಗೂ ಬೇಡವಾದ ಮಡಕೆಯಂತಿದೆ. 9ಅದು ಒಂಟಿಯಾಗಿ
ಅಲೆಯುವ ಕಾಡುಕತ್ತೆಯಂತೆ ಅಸ್ಸೀರಿಯಕ್ಕೆ ಹೋಗಿದೆ: ಎಫ್ರಯಿಮ್ ಕಾಮುಕರಿಗೆ ತನ್ನನ್ನೇ ಮಾರಿಕೊಂಡಿದೆ.
10ಹಣ ತೆತ್ತು ಅನ್ಯರಾಷ್ಟ್ರಗಳೊಡನೆ ಮೈತ್ರಿ ಬೆಳೆಸಿಕೊಂಡಿದ್ದರೂ ನಾನು ಶೀಘ್ರದಲ್ಲಿ ಅದನ್ನು
ಸೆರೆಗೂಡಿಸಲಿರುವೆನು. ಅಸ್ಸೀರಿಯದ ರಾಜಾಧಿರಾಜನು ಹೊರಿಸುವ ಹೊರೆಯಿಂದ ಅದು ಕುಗ್ಗಿಹೋಗಲಿದೆ.

11 "ಎಫ್ರಯಿಮ್ ಪಾಪಪರಿಹಾರಕ್ಕಾಗಿ ಬಲಿಪೀಠಗಳನ್ನು ಕಟ್ಟಿದೆ. ಆ ಬಲಿಪೀಠಗಳೇ ಅದರ ಪಾಪಕ್ಕೆ
ಕಾರಣವಾಗಿ ಪರಿಣಮಿಸಿವೆ. 12ನಾನು ನನ್ನ ಧರ್ಮವನ್ನು ಲಕ್ಷಾಂತರ ವಿಧಿಗಳ ರೂಪದಲ್ಲಿ ಬರೆದುಕೊಟ್ಟರೂ
ಅವುಗಳು ತನಗೆ ಪರಕೀಯವೆಂದು ಭಾವಿಸುತ್ತದೆ. 13ಎಫ್ರಯಿಮಿನವರು ಬಲಿಪಶುಗಳನ್ನು ನನಗೆ
ನೈವೇದ್ಯವಾಗಿ ವಧಿಸುತ್ತಾರೆ, ವಧಿಸಿದ್ದನ್ನು ಭುಜಿಸುತ್ತಾರೆ. ಆದರೆ ಆ ಬಲಿಗಳನ್ನು ನಾನು ಮೆಚ್ಚುವುದಿಲ್ಲ.
ಅವರ ಅಧರ್ಮವನ್ನು ನೆನಪಿಗೆ ತಂದುಕೊಂಡು ಅವರ ಪಾಪಕ್ಕೆ ತಕ್ಕ ದಂಡನೆಯನ್ನು ವಿಧಿಸುವೆನು. ಆ
ಜನರು ಈಜಿಪ್ಟಿಗೆ ಹಿಂದಿರುಗಬೇಕಾಗುವುದು.

14 "ಇಸ್ರಯೇಲ್ ತನ್ನ ಸೃಷ್ಟಿಕರ್ತನನ್ನು ಮರೆತು ಅರಮನೆಗಳನ್ನು ಕಟ್ಟಿಕೊಂಡಿದೆ. ಜುದೇಯವು
ಕೋಟೆಕೊತ್ತಲುಗಳುಳ್ಳ ಪಟ್ಟಣಗಳನ್ನು ನಿರ್ಮಿಸಿಕೊಂಡಿದೆ. ಆದರೆ ನಾನು ಆ ಪಟ್ಟಣಗಳ ಮೇಲೆ
ಬೆಂಕಿಯನ್ನು ಕಾರುವೆನು. ಅದು ಆ ಸೌಧಗಳನ್ನು ನುಂಗಿಬಿಡುವುದು."

## ಇಸ್ರಯೇಲಿಗೆ ಬರಲಿರುವ ದುರವಸ್ಥೆ

**9** ಇಸ್ರಯೇಲ್, ಹರ್ಷಿಸದಿರುಲ ಇತರ ರಾಷ್ಟ್ರಗಳೊಡನೆ ಆನಂದಿಸದಿರು. ನಿನ್ನ ದೇವರನ್ನು ತೊರೆದು
ವ್ಯಭಿಚಾರಮಾಡಿರುವೆ. ಇತರರ ಕಣಗಳಿಂದ ದೊರಕುವ ಕಾಳು ನಿನ್ನ ವ್ಯಭಿಚಾರದ ಸಂಭಾವನೆಯೆಂದು
ಹಂಬಲಿಸಿರುವೆ. 2ಸುಗ್ಗಿಯ ಕಣವೂ ದ್ರಾಕ್ಷಾರಸದ ತೊಟ್ಟಿಯೂ ನಿನ್ನ ಜನರಿಗೆ ಜೀವನಾಧಾರವಾಗವು.
ಹೊಸ ದ್ರಾಕ್ಷಾರಸದ ನಿರೀಕ್ಷೆ ಅವರನ್ನು ನಿರಾಶೆಗೊಳಿಸುವುದು. 3ಅವರು ಸರ್ವೇಶ್ವರಸ್ವಾಮಿಯ ನಾಡಿನಲ್ಲಿ
ವಾಸಮಾಡುವುದಿಲ್ಲ. ಎಫ್ರಯಿಮರು ಈಜಿಪ್ಟಿಗೆ ಹಿಂದಿರುಗುವರು. ಅಸ್ಸೀರಿಯದಲ್ಲಿ ಅವರು ತಿನ್ನುವ ಆಹಾರ
ಹೊಲಸಾಗುವುದು. 4ಇನ್ನವರು ಸರ್ವೇಶ್ವರಸ್ವಾಮಿಗೆ ನೈವೇದ್ಯವಾಗಿ ದ್ರಾಕ್ಷಾರಸವನ್ನು ಸುರಿಯರು. ಅವರ
ಯಜ್ಞಗಳು ಆ ಸ್ವಾಮಿಗೆ ಮೆಚ್ಚುಗೆಯಾಗುವುದಿಲ್ಲ. ಅವರ ಆಹಾರ ಹೆಣದ ಮನೆಯ ಆಹಾರದಂತಿರುವುದು.
ಅದನ್ನು ತಿನ್ನುವವರೆಲ್ಲರು ಅಶುದ್ಧರಾಗುವರು. ಅದು ಹೊಟ್ಟೆ ತುಂಬಲು ಮಾತ್ರ ಸರಿಯೇ ಹೊರತು
ದೇವಾಲಯದಲ್ಲಿ ಮಾಡುವ ಅರ್ಪಣೆಗೆ ಸಲ್ಲದು. 5ಹಬ್ಬದ ದಿನಗಳಲ್ಲಿ ಅವರೇನು ಮಾಡುವರು?
ಸರ್ವೇಶ್ವರ ಸ್ವಾಮಿಯ ಮಹೋತ್ಸವಗಳನ್ನು ಹೇಗೆ ಆಚರಿಸುವರು? 6ವಿನಾಶದ ದೇಶವನ್ನು ಅವರು ಬಿಟ್ಟು
ಹೋಗಬಹುದು. ಆದರೆ ಈಜಿಪ್ಟ್ ಅವರಿಗೆ ಸ್ಮಶಾನವಾಗುವುದು. ಮೋಫ್ ಪಟ್ಟಣದಲ್ಲಿ ಅವರಿಗೆ
ಸಮಾಧಿಯಾಗುವುದು. ಅವರ ಬೆಳ್ಳಿಯ ಒಡವೆಗಳು ಮುಳ್ಳುಪೊದೆಗಳ ಪಾಲಾಗುವುವು; ಅವರ
ಗುಡಾರಗಳಲ್ಲಿ ಕಳೆಗಳು ಬೆಳೆಯುವುವು.

7 ಇಗೋ, ದಂಡನೆಯ ದಿನಗಳು ಸಮೀಪಿಸಿವೆ; ಮುಯ್ಯಿತೀರಿಸುವ ದಿನಗಳು ಬಂದಿವೆ.
ಇಸ್ರಯೇಲರಿಗೆ ಇದು ತಿಳಿದಿರಲಿ. "ಪ್ರವಾದಿಯು ಹುಚ್ಚನು; ದೇವರಾತ್ಮ ಪ್ರೇರಿತನು ಮೂರ್ಖನು," ಎಂದು
ಹೇಳಿಕೊಳ್ಳುತ್ತೀರಿ. ಅತ್ಯಧಿಕವಾಗಿರುವ ನಿಮ್ಮ ಅಧರ್ಮ, ಮಿತಿಮೀರಿರುವ ನಿಮ್ಮ ದ್ವೇಷ ಇದಕ್ಕೆ ಕಾರಣ.
8ಎಫ್ರಯಿಮನ ದೇವಜನರಿಗೆ ಪ್ರವಾದಿಯೇ ಕಾವಲುಗಾರ. ಆದರೂ ಅವನ ಹಾದಿಯಲ್ಲೆಲ್ಲ ಬೇಟೆಯ ಬಲೆ
ಒಡ್ಡಲಾಗಿದೆ. ದೇವರ ಆಲಯದಲ್ಲೂ ಅವನಿಗೆ ಹಗೆತನ ಕಾದಿದೆ. 9ಪೂರ್ವದಲ್ಲಿ ಗಿಬ್ಯದವರು ಭ್ರಷ್ಟರಾದಂತೆ
ಎಫ್ರಯಿಮಿನವರು ಅತಿ ಭ್ರಷ್ಟರಾಗಿದ್ದಾರೆ. ದೇವರು ಅವರ ಅಪರಾಧವನ್ನು ನೆನಪಿಗೆ ತಂದುಕೊಳ್ಳುವರು.
ಅವರ ಪಾಪಕ್ಕೆ ತಕ್ಕ ದಂಡನೆಯನ್ನು ವಿಧಿಸುವರು.

## ಎಫ್ರಯಿಮಿಗೆ ಪುತ್ರಶೋಕ

10 ಬೆಂಗಾಡಿನಲ್ಲಿ ದ್ರಾಕ್ಷೆ ಸಿಕ್ಕಿದಂತೆ ಇಸ್ರಯೇಲ್ ನನಗೆ ಸಿಕ್ಕಿತು. ಅಂಜೂರದ ಮರದ
ಮೊತ್ತಮೊದಲ ಹಣ್ಣು ಕಣ್ಣಿಗೆ ಬೀಳುವಂತೆ ನಿಮ್ಮ ಪಿತೃಗಳು ನನಗೆ ಕಾಣಿಸಿಕೊಂಡರು. ಆದರೆ ಅವರು
ಬಾಳ್ ಪೆಗೋರಿಗೆ ಬಂದು ಬಾಳ್ ದೇವತೆಯ ಭಕ್ತರಾದರು. ಅವರು ನೆಚ್ಚಿಕೊಂಡ ದೇವತೆಯಂತೆ
ನೀಚರಾದರು. 11ಎಫ್ರಯಿಮರ ಮಹಿಮೆ ಪಕ್ಷಿಯಂತೆ ಹಾರಿಹೋಗುವುದು. ಅಲ್ಲಿ ಯಾರೂ ಮಕ್ಕಳನ್ನು
ಹೆರುವುದಿಲ್ಲ; ಯಾರೂ ಗರ್ಭಿಣಿಯಾಗುವುದಿಲ್ಲ; ಯಾರೂ ಗರ್ಭಧರಿಸುವುದಿಲ್ಲ. 12ಒಂದು ವೇಳೆ
ಮಕ್ಕಳನ್ನು ಹೆತ್ತು ಸಾಕಿದರೂ ಅವರಾರೂ ಉಳಿಯದಂತೆ ಅವರಿಗೆ ನಿರಂತರವಾಗಿ ಪುತ್ರ
ಶೋಕವನ್ನುಂಟುಮಾಡುವೆನು. ನಾನು ಅವರಿಗೆ ವಿಮುಖನಾಗುವೆನು. ಅವರ ಗತಿ
ಹೇಳತೀರದಂತಾಗುವುದು.

13 ಎಫ್ರಯಿಮಿನ ಮಕ್ಕಳು ಬೇಟೆಗೆ ಗುರಿ ಆದವರಂತೆ ಕಾಣಿಸುತ್ತಾರೆ. ಎಫ್ರಯಿಮ್ ತನ್ನ ಪುತ್ರರನ್ನು
ವಧ್ಯಸ್ಥಾನಕ್ಕೆ ಕರೆದೊಯ್ಯಬೇಕಾಗುವುದು. 14ಸರ್ವೇಶ್ವರಾ, ಇವರಿಗೆ ಏನನ್ನು ವಿಧಿಸುವೆ? ಇವರಿಗೆ ಎಂಥ
ಗತಿಯನ್ನು ಬರಮಾಡುವೆ? ಅವರ ಮಹಿಳೆಯರಿಗೆ ಗರ್ಭಪಾತವಾಗಲಿ! ಅವರ ಮೊಲೆ ಬತ್ತಿಹೋಗಲಿ!

## ಇಸ್ರಯೇಲರು ಅಲೆಮಾರಿಗಳಾಗುವರು

15 "ಅವರ ದುಷ್ಟತನ ಗಿಲ್ಗಾಲಿನಲ್ಲೇ ಪ್ರಾರಂಭವಾಯಿತು. ಅಲ್ಲೇ ಅವರು ನನ್ನ ದ್ವೇಷಕ್ಕೆ
ಗುರಿಯಾದರು. ಅವರ ಪಾಪಕೃತ್ಯಗಳ ನಿಮಿತ್ತ ನನ್ನ ಆಲಯದಿಂದ ಹೊರಗಟ್ಟುವೆನು. ಅವರನ್ನು ಇನ್ನು
ಪ್ರೀತಿಸೆನು; ಅವರ ಅಧಿಕಾರಿಗಳೆಲ್ಲ ದ್ರೋಹಿಗಳೇ. 16ಎಫ್ರಯಿಮಿಗೆ ಏಟು ಬಿದ್ದಿದೆ; ಅವರ ವಂಶದ ಬೇರು

ಬತ್ತಿಹೋಗಿದೆ. ಅವರು ಫಲಹೀನರಾಗಿದ್ದಾರೆ. ಮಕ್ಕಳನ್ನು ಹೆತ್ತರೂ ಅವಳ ಕರುಳ ಕುಡಿಯನ್ನು ಕತ್ತರಿಸಿ ಹಾಕುವೆನು.”

17 ತಮ್ಮ ಮಾತಿಗೆ ಕಿವಿಗೊಡದ ಈ ಜನರನ್ನು ಸರ್ವೇಶ್ವರ ತಳ್ಳಿಬಿಡುವರು. ಇತರ ಜನಾಂಗಗಳ ಮಧ್ಯೆ ಅವರು ಅಲೆಮಾರಿಗಳಂತೆ ಇರುವರು.

### ಪಾಳುಬಿದ್ದ ಬಲಿಪೀಠಗಳು

**10** ಇಸ್ರಯೇಲ್ ಸೊಂಪಾಗಿ ಬೆಳೆದ ದ್ರಾಕ್ಷಾಲತೆ, ಫಲಭರಿತ ದ್ರಾಕ್ಷಾಬಳ್ಳಿ. ಅದರ ಫಲ ಹೆಚ್ಚಿದಂತೆಲ್ಲ
ಬಲಿಪೀಠಗಳು ಹೆಚ್ಚಿಕೊಂಡಿವೆ. ಆ ನಾಡು ಅಭಿವೃದ್ಧಿಯಾದಂತೆಲ್ಲ, ಹೆಚ್ಚು ಸುಂದರವಾದ ವಿಗ್ರಹಸ್ತಂಭಗಳು
ನಿರ್ಮಿತವಾಗಿವೆ. 2ಅವರದು ವಂಚನೆಯ ಮನಸ್ಸು. ಈಗ ಅವರು ತಮ್ಮ ಪಾಪಕ್ಕೆ ತಕ್ಕ ದಂಡನೆಯನ್ನು
ಅನುಭವಿಸಲೇಬೇಕು. ಸರ್ವೇಶ್ವರಸ್ವಾಮಿ ಅವರ ಯಜ್ಞವೇದಿಗಳನ್ನು ಕೆಡವುವರು. ಅವರ
ಪೂಜಾಸ್ತಂಭಗಳನ್ನು ಒಡೆದು ಹಾಕುವರು.

3 “ನಮಗೆ ರಾಜನೇ ಇಲ್ಲ. ನಾವು ಸರ್ವೇಶ್ವರನಲ್ಲಿ ಭಯಭಕ್ತಿಯುಳ್ಳವರಲ್ಲ. ನಮಗೆ ರಾಜನಿದ್ದರೂ
ಅವನು ನಮಗೆ ಏನು ತಾನೇ ಮಾಡಿಯಾನು?” ಎಂದು ಆ ಜನರು ಆಡಿಕೊಳ್ಳುತ್ತಾರೆ. 4ಅವರು ಹರಟೆ
ಹೊಡೆಯುತ್ತಾರೆ; ಸುಳ್ಳಾಣೆ ಇಟ್ಟು ಸಂಧಾನಮಾಡಿಕೊಳ್ಳುತ್ತಾರೆ. ಉತ್ತ ಹೊಲದಲ್ಲಿ ಬೆಳೆಯುವ ವಿಷದ
ಕಳೆಗಳಂತೆ ನ್ಯಾಯಸ್ಥಾನಕ್ಕೆ ಬರುವ ಅವರ ವಾದವಿವಾದಗಳು ಹೆಚ್ಚಿಕೊಳ್ಳುತ್ತವೆ.

5 ಬೇತಾವೆನಿನ ಬಸವನಿಗೆ ಸಮಾರ್ಯದ ನಿವಾಸಿಗಳು ದಿಗಿಲುಗೊಳ್ಳುವರು; ಅದನ್ನು
ಕಾಣದುದಕ್ಕಾಗಿ ಭಕ್ತಜನರು ಎದೆಬಡಿದುಕೊಳ್ಳುವರು. ಅದರ ಮಹಿಮೆ ನಂದಿಹೋಯಿತು ಎಂದು
ಪೂಜಾರಿಗಳು ಗೋಳಾಡುವರು. 6ಆ ವಿಗ್ರಹವನ್ನು ಅಸ್ಸೀರಿಯದ ಜಗಳಗಂಟಿ ರಾಜನಿಗೆ ಕಾಣಿಕೆಯಾಗಿ
ಕೊಡಲಾಗುವುದು. ಎಫ್ರಯಿಮಿಗೆ ಅವಮಾನವಾಗುವುದು. ಇಸ್ರಯೇಲ್ ತಾನು ಕೆತ್ತಿಸಿಕೊಂಡ ವಿಗ್ರಹಕ್ಕಾಗಿ
ನಾಚಿಕೆಗೀಡಾಗುವುದು. 7ಸಮಾರ್ಯದ ರಾಜನು ಪ್ರವಾಹದಲ್ಲಿ ಕೊಚ್ಚಿಕೊಂಡು ಹೋಗುವ ಕಡ್ಡಿಯಂತೆ
ಕಣ್ಮರೆ ಆಗುವನು. 8ಇಸ್ರಯೇಲಿನ ಪಾಪಕ್ಕೆ ಆಸ್ಪದ ಆಗಿದ್ದ ಆವೆನಿನ ಪೂಜಾಸ್ಥಾನಗಳು ನಾಶವಾಗುವುವು.
ಪಾಳುಬಿದ್ದ ಬಲಿಪೀಠಗಳ ಮೇಲೆ ಮುಳ್ಳುಕಳ್ಳಿಗಳು ಹುಟ್ಟಿಕೊಳ್ಳುವುವು. ಅಲ್ಲಿನ ಜನರು: ‘ಪರ್ವತವೇ,
ನಮ್ಮನ್ನು ತುಳಿದುಬಿಡಿ; ಗುಡ್ಡಗಳೇ ನಮ್ಮನ್ನು ನುಂಗಿಬಿಡಿ’ ಎಂದು ಕೂಗಿಕೊಳ್ಳುವರು.”

### ಅಪರಾಧಕ್ಕೆ ತಕ್ಕ ಶಾಸ್ತಿ

9 “ಇಸ್ರಯೇಲ್, ನೀನು ಗಿಬ್ಯದಲ್ಲಿದ್ದ ಕಾಲದಿಂದ ನನಗೆ ವಿರುದ್ಧ ಪಾಪ ಮಾಡುತ್ತಲೇ ಬಂದಿರುವೆ.
ನಿನ್ನ ಜನರು ಪಾಪದಲ್ಲಿಯೇ ಮುಂದುವರಿಯುತ್ತಿದ್ದಾರೆ. ಗಿಬ್ಯದ ನಿವಾಸಿಗಳು ಯುದ್ಧಕ್ಕೆ ತುತ್ತಾಗಲಿದ್ದಾರೆ.
10ಸಕಾಲದಲ್ಲಿ ನಾನು ಅವರನ್ನು ದಂಡಿಸುವೆನು; ಅವರ ಇಮ್ಮಡಿ ಅಪರಾಧಕ್ಕೆ ತಕ್ಕ ಶಾಸ್ತಿ ಆಗುವುದು; ಆಗ
ಇತರ ರಾಷ್ಟ್ರಗಳು ಅವರಿಗೆ ವಿರುದ್ಧವಾಗಿ ಒಂದುಗೂಡುವುವು.

11 “ಎಫ್ರಯಿಮ್ ತೆನೆಹುಲ್ಲನ್ನು ತುಳಿಯುವುದರಲ್ಲಿ ಪಳಗಿರುವ ಹೋರಿಕರು. ಅದರ ಅಂದವಾದ
ಹೆಗಲಮೇಲೆ ನೇಗಿಲನ್ನು ಇಟ್ಟಿರಲಿಲ್ಲ. ಜುದೇಯವು ಉಳುವಂತೆ ಮಾಡಿದೆನು. ಯಕೋಬ್ ಕುಂಟೆ
ಎಳೆಯುವಂತೆ ಮಾಡಿದೆನು. ಈಗ ಎಫ್ರಯಿಮನ್ನು ನೊಗಕ್ಕೆ ಹೂಡುವೆನು. 12ನಾನು ಇಂತೆಂದೆ: “ಪಾಳುಬಿದ್ದ
ನೆಲವನ್ನು ಉತ್ತು ಹದಮಾಡಿರಿ; ನೀತಿಯ ಬೀಜವನ್ನು ಬಿತ್ತಿರಿ; ಪ್ರೀತಿಯ ಫಲವನ್ನು ಕೊಯ್ಯಿರಿ. ಸಮಯವು
ಸನ್ನಿಹಿತವಾಗಿದೆ. ಸರ್ವೇಶ್ವರ ಆಗಮಿಸಿ ನಿಮ್ಮ ಮೇಲೆ ನೀತಿಯನ್ನು ಮಳೆಗರೆಯುವಂತೆ ಅವರಿಗೆ ಶರಣು
ಹೋಗಬೇಕು. 13ಇದಕ್ಕೆ ಬದಲಾಗಿ ನೀನು ಅಧರ್ಮದ ಬೀಜವನ್ನು ಬಿತ್ತಿರುವೆ, ಅನ್ಯಾಯದ ಬೆಳೆಯನ್ನು
ಕೊಯ್ದಿರುವೆ, ಅಸತ್ಯದ ಫಲವನ್ನು ಉಂಡಿರುವೆ. ನಿನ್ನ ಭುಜಬಲದಲ್ಲೂ ಸಮರ ಶೂರರಲ್ಲೂ ಭರವಸೆಯಿಟ್ಟೆ.

14 ಎಂತಲೇ ನಿನ್ನ ಜಾತಿಜನಾಂಗಗಳ ವಿರುದ್ಧ ಯುದ್ಧಘೋಷಣೆ ಮೊಳಗುವುದು. ಕಾಳಗದ
ದಿನದಲ್ಲಿ ಕೋಟೆಕೊತ್ತಲಗಳು ಸೂರೆಯಾಗುವುವು. ಶಲ್ಮಾನ ರಾಜನು ಬೇತ್‍ಅರ್ಬೇಲ್ ಪಟ್ಟಣವನ್ನು
ನೆಲಸಮ ಮಾಡಿದಂತೆ ಆಗುವುದು. ತಾಯಿ ಮಕ್ಕಳನ್ನು ಬಂಡೆಗೆ ಅಪ್ಪಳಿಸಿ ಸಾಯಿಸಿದಂತೆ ಇದೆಲ್ಲ

ನಡೆಯುವುದು. 15ಬೇತೇಲಿನ ಜನರೇ, ನಿಮಗೂ ಇಂಥ ದುರ್ಗತಿಯೇ ಸಂಭವಿಸಲಿರುವುದು, ಬೆಳಗಾಗುವುದರೊಳಗೆ ಇಸ್ರಯೇಲಿನ ರಾಜನು ಹತನಾಗುವನು. ಕಾರಣ, ನಿಮ್ಮ ಅಕ್ರಮವು ಘೋರವಾದುದು!"

**ನಾಶಮಾಡುವ ರೋಷ ನನ್ನದಲ್ಲ**

**11** ಸರ್ವೇಶ್ವರ ಇಂತೆನ್ನುತ್ತಾರೆ:

"ಪ್ರೀತಿಸಿದೆನು ಇಸ್ರಯೇಲನ್ನು ಅದರ
ಬಾಲ್ಯಾವಸ್ಥೆಯಿಂದ;
ಕರೆದೆನು ನನ್ನ ಆ ಪುತ್ರನನು
ಈಜಿಪ್ಟಿನಿಂದ.
2 ದೂರ ಸರಿದರು ಆ ಇಸ್ರಯೇಲರು ನಾ ಕರೆದರೂ
ನನ್ನ ಬಳಿಗೆ
ಅರ್ಪಿಸುತ್ತಾ ಬಂದರು ಯಜ್ಞವನ್ನು
ಬಾಳ್‍ದೇವತೆಗಳಿಗೆ
ಧೂಪಾರತಿ ಬೆಳಗುತ್ತಾ ಬಂದರು
ಆ ವಿಗ್ರಹಗಳಿಗೆ.
3 ಎಫ್ರಯಿಮಿಗೆ ಅಂಬೆಗಾಲಿಡಲು ಕಲಿಸಿದವನು ನಾನೇ
ಅದನ್ನು ಕೈಗಳಲ್ಲಿ ಎತ್ತಿಕೊಂಡು ಆಡಿಸಿದವನು ನಾನೇ
ಆ ಜನರನ್ನು ಸ್ವಸ್ಥಮಾಡಿದವನೂ ನಾನೇ;
ಆದರೆ ಅರಿತುಕೊಳ್ಳದೆ ಹೋದರು ಈ ವಿಷಯವನೇ.
4 ಬೆಳೆಸಿದೆನು ಅವರನ್ನು ಕರುಣೆಯ ಕಟ್ಟುಗಳಲಿ,
ಪ್ರೀತಿಯ ಬಂಧನದಲಿ
ಸುಧಾರಿಸಿದೆ ಅವರ ಹೆಗಲಿಗೆ ಬಿಗಿದಿದ್ದ
ನೊಗವನ್ನು ಬಿಚ್ಚಿ
ಊಟ ಬಡಿಸಿದೆ ಅವರಿಗೆ ನೆಲಸಮ ಬಗ್ಗಿ.

5 "ಅವರು ನನ್ನ ಬಳಿಗೆ ಬಾರದ ಕಾರಣ, ಇಸ್ರಯೇಲ್ ಈಜಿಪ್ಟಿಗೆ ಹಿಂದಿರುಗುವುದು, ಅಸ್ಸೀರಿಯದ
ಆಳ್ವಿಕೆಗೆ ಒಳಗಾಗುವುದು. 6ತಮ್ಮ ಇಚ್ಛಾನುಸಾರ ಅವರು ನಡೆದ ಕಾರಣ, ಅವರ ಪಟ್ಟಣಗಳಲ್ಲಿ ಕತ್ತಿಯ
ಕಾಳಗ ನಡೆಯುವುದು. ಅವರ ಪುರದ್ವಾರದ ಕಬ್ಬಿಣದ ಅಗುಳಿಗಳನ್ನು ಮುರಿದು ಕೋಟೆಯಲ್ಲೇ ಅವರನ್ನು
ಕಡಿದು ಹಾಕುವರು. 7ಅವರು ನನ್ನ ಕಡೆಯಿಂದ ದೂರ ಹೋಗುವ ಹಠಹಿಡಿದಿದ್ದಾರೆ; ಅವರು ನೊಗದ
ಭಾರವನ್ನು ತಾಳದೆ ಕೂಗಿಕೊಂಡರೂ ಅದನ್ನು ಬಿಚ್ಚುವವರು ಯಾರೂ ಇಲ್ಲ.

8 "ಹೇಗೆ ತ್ಯಜಿಸಲಿ ಎಫ್ರಯಿಮೇ, ನಿನ್ನನು
ಹೇಗೆ ಕೈಬಿಡಲಿ ಇಸ್ರಯೇಲೇ, ನಿನ್ನನು.
ಹೇಗೆ ಈಡುಮಾಡಲಿ ದುರ್ಗತಿಗೆ ನಿನ್ನನು
ಅದ್ಮದಂತೆ,
ಹೇಗೆ ನಾಶಮಾಡಲಿ ನಿನ್ನನು
ಚೆಬೋಯಿಮನಂತೆ?
9 ತಡೆಹಿಡಿಯುವೆನು ನನ್ನ ಉಗ್ರಕೋಪವನು
ನಾಶಪಡಿಸಲಾರೆ ಮರಳಿ ಎಫ್ರಯಿಮನು.
ನರಮಾನವನಲ್ಲ, ದೇವರು ನಾನು

ನಿಮ್ಮಲ್ಲಿ ನೆಲೆಯಾಗಿರುವ
ಸದಮಲಸ್ವಾಮಿಯು !
ನನ್ನದಲ್ಲ ನಾಶಮಾಡುವ ರೋಷವು.

10 "ಶತ್ರುಗಳ ಕಡೆಗೆ ಸಿಂಹದಂತೆ ಗರ್ಜಿಸುವ ಸ್ವಾಮಿಯನ್ನು ಆ ಜನರು ಹಿಂಬಾಲಿಸುತ್ತಾರೆ. ಆತ ಆರ್ಭಟಿಸಲು ಅವರ ಮಕ್ಕಳು ನಡುನಡುಗುತ್ತಾ ಬರುತ್ತಾರೆ.
11ಗುಬ್ಬಿಗಳಂತೆ ಈಜಿಪ್ಟಿನಿಂದಲೂ ಪಾರಿವಾಳಗಳಂತೆ ಅಸ್ಸೀರಿಯದಿಂದಲೂ ಅವರು ಬೆದರುತ್ತಾ ಓಡಿಬರುತ್ತಾರೆ. ಅವರು ತಮ್ಮ ತಮ್ಮ ಮನೆಗಳಿಗೆ ಹಿಂದಿರುಗುವಂತೆ ಮಾಡುವೆನು.

12 "ಎಫ್ರಯಿಮಿನ ಸುಳ್ಳುತನ, ಇಸ್ರಯೇಲಿನ ಕಪಟತನ ನನ್ನನ್ನು ಮುತ್ತಿಕೊಂಡಿವೆ. ಸತ್ಯ ಸ್ವರೂಪಿಯೂ ಪರಮಪಾವನರೂ ಆದ ದೇವರಿಂದ ದೂರವಾಗಿ ಜುದೇಯವು ಅಲೆಯುತ್ತಿದೆ.

### ಜುದೇಯದ ಮೇಲೆ ಆಪಾದನೆ

**12** "ಎಫ್ರಯಿಮ್ ಕೇವಲ ಗಾಳಿಗೆ ಕುರಿಗಾಹಿ; ಅದು ದಿನವಿಡೀ ಗುದ್ದಾಡುತ್ತಿರುವುದು ಮೂಡಣಗಾಳಿಯನ್ನೇ. ಅದು ಮೋಸವನ್ನೂ ಹಿಂಸೆಯನ್ನೂ ನಿರಂತರವಾಗಿ ಹೆಚ್ಚಿಸುತ್ತಿದೆ. ಅಸ್ಸೀರಿಯದೊಂದಿಗೆ ಒಪ್ಪಂದ ಮಾಡಿಕೊಳ್ಳುತ್ತಿದೆ. ಈಜಿಪ್ಟಿಗೆ ಎಣ್ಣೆಯನ್ನು ಕಾಣಿಕೆಯಾಗಿ ಕಳುಹಿಸುತ್ತಿದೆ."

2 ಸರ್ವೇಶ್ವರ ಜುದೇಯದ ಮೇಲೆ ಆಪಾದನೆ ಹೊರಿಸಿದ್ದಾರೆ. ಯಕೋಬನನ್ನು ಅದರ ನಡತೆಗೆ ತಕ್ಕಂತೆ ದಂಡಿಸುತ್ತಾರೆ. ಅದರ ಕೃತ್ಯಗಳಿಗನುಸಾರವಾಗಿ ಪ್ರತೀಕಾರ ಮಾಡುತ್ತಾರೆ.
3ಯಕೋಬನು ಅಣ್ಣನ ಜೊತೆ ತಾಯಿಯ ಗರ್ಭದಲ್ಲಿರುವಾಗಲೇ ಅವನ ಹಿಮ್ಮಡಿಯನ್ನು ಹಿಡಿದು ವಂಚಿಸಿದವನು. ಪ್ರಾಯಕ್ಕೆ ಬಂದಮೇಲೆ ದೇವರೊಡನೆ ಹೋರಾಡಿದನು.
4ಹೌದು, ಯಕೋಬನು ದೇವದೂತನ ಸಂಗಡ ಹೋರಾಡಿ ಗೆದ್ದನು. ಅಳುತ್ತಾ ಆತನ ಅನುಗ್ರಹಕ್ಕಾಗಿ ಯಾಚಿಸಿದನು. ಆತನು ಬೇತೇಲಿನಲ್ಲಿ ದೇವರನ್ನು ಕಂಡನು. ದೇವರು ಅಲ್ಲಿ ಆತನೊಂದಿಗೆ ಮಾತನಾಡಿದರು.
5ಅವರೇ ಸರ್ವಶಕ್ತನಾದ ದೇವರು; ಸರ್ವೇಶ್ವರ ಎಂಬುದೇ ಅವರನ್ನು ಸ್ಮರಿಸುವ ನಾಮಧೇಯ.
6ಆದುದರಿಂದ ಇಸ್ರಯೇಲ್, ನೀನು ದೇವರ ಕಡೆ ತಿರುಗಿಕೋ, ನೀತಿ ಪ್ರೀತಿಗಳಿಗೆ ಅನುಗುಣವಾಗಿ ನಡೆ. ನಿರಂತರವಾಗಿ ದೇವರನ್ನು ನಿರೀಕ್ಷಿಸಿಕೊಂಡಿರು.

### ಇಸ್ರಯೇಲರಿಗೆ ವನವಾಸ

7 ಸರ್ವೇಶ್ವರ ಇಂತೆನ್ನುತ್ತಾರೆ: "ಇಸ್ರಯೇಲ್ ಮೋಸದ ತಕ್ಕಡಿ ಹಿಡಿದು ವ್ಯಾಪಾರಮಾಡುವ ಕಾನಾನ್ಯರಂತೆ ಇದೆ. ಇತರರಿಂದ ಕಸಿದುಕೊಳ್ಳಬೇಕೆಂಬುದೇ ಅದರ ದುರಾಸೆ."
8ಎಫ್ರಯಿಮ್ ಹೇಳಿಕೊಳ್ಳುವು ದೇನೆಂದರೆ: "ನಾನು ಐಶ್ವರ್ಯವಂತನಾಗಿಬಿಟ್ಟೆ, ನನಗಾಗಿ ಆಸ್ತಿಪಾಸ್ತಿಯನ್ನು ಗಳಿಸಿಕೊಂಡಿದ್ದೇನೆ. ನನ್ನ ಗಳಿಕೆಯಲ್ಲಿ ಪಾಪವೆಂಬ ದೋಸವೇನೂ ಇಲ್ಲ."
9ಆದರೆ ಈಜಿಪ್ಟಿನಿಂದ ನಿನ್ನನ್ನು ಬಿಡಿಸಿಕೊಂಡು ಬಂದಾಗಿನಿಂದಲೂ ನಿನ್ನ ಸರ್ವೇಶ್ವರನಾದ ದೇವರಾದ ನಾನು, ಯಾತ್ರಾದಿನಗಳಲ್ಲಿ ನೀನು ವನವಾಸ ಮಾಡಿದಂತೆ ನಿಮ್ಮನ್ನು ಪುನಃ ಗುಡಾರದವಾಸಕ್ಕೆ ಗುರಿಪಡಿಸುವೆನು.

10 "ಪ್ರವಾದಿಗಳೊಂದಿಗೆ ಮಾತನಾಡಿದ್ದೇನೆ. ಅವರಿಗೆ ಹಲವಾರು ದರ್ಶನಗಳನ್ನು ದಯಪಾಲಿಸಿದ್ದೇನೆ. ಅವರ ಮುಖಾಂತರ ಸಾಮತಿಗಳನ್ನು ಹೇಳಿ ಜನರಿಗೆ ಮುನ್ನೆಚ್ಚರಿಕೆ ನೀಡಿದ್ದೇನೆ.
11ಆದರೂ ಗಿಲ್ಯಾದಿನಲ್ಲಿ ಅಧರ್ಮ ನೆಲೆಗೊಂಡಿದೆ. ಅದಕ್ಕೆ ದುರ್ಗತಿ ಕಾದಿದೆ. ಗಿಲ್ಗಾಲಿನಲ್ಲಿ ಬಸವನಿಗೆ ಯಜ್ಞಗಳನ್ನು ಅರ್ಪಿಸಲಾಗುತ್ತಿದೆ. ಅಲ್ಲಿನ ನೇಗಿಲಿಗೆ ಸಿಕ್ಕುವ ಕಲ್ಲುಕುಪ್ಪೆಗಳಾಗುವುವು."

12 ಯಕೋಬನು ಮೆಸಪಟೋಮಿಯಕ್ಕೆ ಓಡಿಹೋಗಬೇಕಾಯಿತು. ಅಲ್ಲಿ ಮದುವೆಗೋಸ್ಕರ ಜೀತಮಾಡಿದನು; ವಧುವಿಗೋಸ್ಕರ ಕುರಿಕಾಯ್ದನು.
13ದೇವರು ಪ್ರವಾದಿಯನ್ನು ಕಳುಹಿಸಿ, ಇಸ್ರಯೇಲನ್ನು ಈಜಿಪ್ಟಿನಿಂದ ಬಿಡುಗಡೆ ಮಾಡಿದರು. ಪ್ರವಾದಿಯ ಮುಖಾಂತರ ಇಸ್ರಯೇಲಿಗೆ ರಕ್ಷಣೆ ದೊರಕಿತು.
14ಎಫ್ರಯಿಮ್ ದೇವರನ್ನು ಉಗ್ರವಾಗಿ ರೇಗಿಸಿದೆ; ರಕ್ತಾಪರಾಧವನ್ನು ಅದರ ಮೇಲೆ ಹೊರಿಸಲಾಗುವುದು. ಅದು ಮಾಡಿದ ಅವಮಾನಕ್ಕೆ ಪ್ರತಿಯಾಗಿ ದೇವರು ಅದನ್ನು ಅವಮಾನಕ್ಕೆ ಗುರಿಪಡಿಸುವರು.

## ಇಸ್ರಯೇಲಿನ ಮೇಲೆ ತೀರ್ಪು

**13** ಪೂರ್ವದಲ್ಲಿ ಎಫ್ರಯಿಮ್ ಮಾತನಾಡಿದಾಗ ಎಲ್ಲರೂ ನಡುಗುತ್ತಿದ್ದರು. ಅದು ಇಸ್ರಯೇಲಿನಲ್ಲಿ ಅಷ್ಟು ಉನ್ನತ ಸ್ಥಿತಿಗೆ ಏರಿತ್ತು. ಆದರೆ ಅದು ಬಾಳ್ ದೇವತೆಗೆ ಆರಾಧನೆ ಸಲ್ಲಿಸಿದ್ದರಿಂದ ಪಾಪಕಟ್ಟಿಕೊಂಡು ಪತನವಾಯಿತು. 2ಈಗ ಎಫ್ರಯಿಮರ ಪಾಪ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಅವರು ಬೆಳ್ಳಿಬಂಗಾರವನ್ನು ಕರಗಿಸಿ ಇಷ್ಟಬಂದಂತೆ ಬೊಂಬೆಗಳನ್ನು ಮಾಡಿಕೊಂಡಿದ್ದಾರೆ. ಅವೆಲ್ಲವು ಶಿಲ್ಪಿಗಳ ಕೈ ಕೆಲಸವೇ ಹೊರತು ಮತ್ತೇನು ಅಲ್ಲ. ಇಂಥ ವಿಗ್ರಹಗಳನ್ನು ಪೂಜೆಗಾಗಿ ಪ್ರತಿಷ್ಠಾಪನೆ ಮಾಡುತ್ತಾರೆ. ಬುದ್ಧಿಜೀವಿಗಳಾದ ಇವರು ಬಸವನಿಗೆ ಮುದ್ದಿಡುತ್ತಾರೆ. 3ಇವರು ಪ್ರಾತಃಕಾಲದ ಮೋಡದಂತೆ ಮಾಯವಾಗುತ್ತಾರೆ. ಇಬ್ಬನಿಯಂತೆ ಕರಗಿ ಹೋಗುತ್ತಾರೆ. ಬಿರುಗಾಳಿಗೆ ಸಿಕ್ಕಿದ ಹೊಟ್ಟಿನಂತೆ ತೂರಿಹೋಗುತ್ತಾರೆ; ಗವಾಕ್ಷಿಯ ಹೊಗೆಯಂತೆ ಗಾಳಿಯಲ್ಲಿ ತೇಲಿಹೋಗುತ್ತಾರೆ.

4 ಸರ್ವೇಶ್ವರ ಇಂತೆನ್ನುತ್ತಾರೆ: "ಈಜಿಪ್ಟಿನಿಂದ ನಿನ್ನನ್ನು ಬಿಡಿಸಿಕೊಂಡು ಬಂದಾಗಲಿಂದ ನಾನೇ ನಿನ್ನ ಸರ್ವೇಶ್ವರನಾದ ದೇವರು. ನಾನಲ್ಲದೆ ಬೇರೆ ದೇವರುಗಳು ನಿನಗಿಲ್ಲ. ನಾನಲ್ಲದೆ ನಿನಗೆ ಬೇರೆ ಉದ್ಧಾರಕರಿಲ್ಲ. 5ಬೆಂಗಾಡಿನಲ್ಲಿ, ಘೋರ ಮರುಭೂಮಿಯಲ್ಲಿ ನಿನ್ನನ್ನು ಕಾಪಾಡಿದವನು ನಾನೇ. 6ಅನ್ನ ಆಹಾರ ಯಥೇಚ್ಛವಾಗಿ ಸಿಕ್ಕಿದಾಗ ನಿನ್ನವರು ತಿಂದು ತೃಪ್ತರಾದರು; ಅಹಂಭಾವ ಅವರ ನೆತ್ತಿಗೇರಿತು. ಆಗ ಅವರು ನನ್ನನ್ನು ಮರೆತುಬಿಟ್ಟರು. 7ಆದುದರಿಂದ ನಾನು ಅವರಿಗೆ ಸಿಂಹದಂತಿರುವೆನು. ದಾರಿಯ ಮಗ್ಗುಲಲ್ಲಿ ಹೊಂಚು ಹಾಕುವ ಚಿರತೆಯಂತಿರುವೆನು. 8ಮರಿಗಳನ್ನು ಕಳೆದುಕೊಂಡ ಕರಡಿಯಂತೆ ಅವರ ಮೇಲೆ ಬೀಳುವೆನು. ಅವರ ಎದೆಯನ್ನು ಬಗಿದುಹಾಕುವೆನು. ಮೃಗರಾಜರಂತೆ ಅವರನ್ನು ನುಂಗಿಬಿಡುವೆನು. ಕಾಡುಮೃಗದಂತೆ ಅವರನ್ನು ಸೀಳಿಬಿಡುವೆನು.

9 "ಇಸ್ರಯೇಲ್, ನಿನ್ನನ್ನು ನಾಶಮಾಡುವೆನು, ನಿನಗೆ ನೆರವಾಗಬಲ್ಲವರು ಯಾರು? 10'ನನಗೆ ರಾಜನು ಬೇಕು, ರಾಜಾಧಿಕಾರಿಗಳು ಬೇಕು' ಎಂದು ಹೇಳಿಕೊಂಡಿದ್ದಿಯಲ್ಲಾ; ನಿನ್ನನ್ನು ರಕ್ಷಿಸಬಲ್ಲ ರಾಜನೆಲ್ಲಿ? ನಿನ್ನನ್ನು ಕಾಪಾಡಬಲ್ಲ ನಗರಪಾಲಕರೆಲ್ಲಿ? 11ಇಷ್ಟವಿಲ್ಲದೆ ಸಿಟ್ಟಿನಿಂದ ನಿನಗೆ ರಾಜನನ್ನು ಕೊಟ್ಟೆ. ಈಗ ಕಡುಕೋಪದಿಂದ ಆ ರಾಜರನ್ನು ತೆಗೆದುಬಿಡುತ್ತೇನೆ.

12 "ಎಫ್ರಯಿಮಿನ ಅಕ್ರಮಗಳೆಲ್ಲ ದಾಖಲಾಗಿವೆ. ಅದರ ಪಾಪಕೃತ್ಯಗಳನ್ನೆಲ್ಲ ಒಂದೂ ಬಿಡದೆ ಲೆಕ್ಕಹಾಕಿಡಲಾಗಿದೆ. 13ಎಫ್ರಯಿಮಿಗೆ ಪ್ರಸವವೇದನೆ ಬಂದಿದೆ. ಅಷ್ಟೇ ಅಲ್ಲ. ಅದೊಂದು ಮಂಕು ಮಗುವಿನಂತಿದೆ. ಹುಟ್ಟಿ, ಹೊರಗೆ ಬರಬಹುದಾದರೂ, ಅದು ಬಾರದೆ ಇದೆ. 14ಅದನ್ನು ಪಾತಾಳದ ಹಿಡಿತದಿಂದ ನಾನು ಬಿಡಿಸಲಾರೆ. ಮರಣದ ಬಾಧೆಯಿಂದ ಅವರನ್ನು ರಕ್ಷಿಸಲಾರೆ. 'ಮರಣವೇ, ನಿನ್ನ ಮಾರಕ ವ್ಯಾಧಿಗಳಿಂದ ಅವರನ್ನು ಬಾಧಿಸು. ಪಾತಾಳವೇ, ಅವರನ್ನು ಕಬಳಿಸಿ ನಾಶಗೊಳಿಸು. ಕರುಣೆ ನನ್ನಿಂದ ದೂರವಾಗಿದೆ. 15ಎಫ್ರಯಿಮ್ ಕಳೆಗಳ ನಡುವೆ ಸೊಂಪಾಗಿ ಬೆಳೆದ ಜೊಂಡಿನಂತಿದೆ. ಆದರೆ ಸರ್ವೇಶ್ವರ ಮರುಭೂಮಿಯಿಂದ ಮೂಡಣಗಾಳಿ ಬೀಸುವಂತೆ ಮಾಡುವರು. ಅದರ ಬುಗ್ಗೆ ಬತ್ತಿ ಹೋಗುವುದು. ಅದರ ಒರತೆ ಒಣಗಿಹೋಗುವುದು. ಅದರ ಸಿರಿ ಸಂಪತ್ತಿನ ನಿಧಿಯನ್ನು ಶತ್ರುಗಳು ಸೂರೆಮಾಡುವರು. 16ಸಮಾರ್ಯವು ತನ್ನ ದೇವರಿಗೆ ವಿರುದ್ಧ ದಂಗೆ ಎದ್ದಿದೆ. ಅದಕ್ಕೆ ತಕ್ಕ ಪ್ರತಿಫಲವನ್ನು ಅನುಭವಿಸಲೇಬೇಕು. ಅದರ ಜನರು ಖಡ್ಗದಿಂದ ಹತರಾಗುವರು; ಶತ್ರುಗಳು ಅಲ್ಲಿನ ಮಕ್ಕಳನ್ನು ಬಂಡೆಗೆ ಅಪ್ಪಳಿಸುವರು. ಗರ್ಭಿಣಿಯರ ಹೊಟ್ಟೆಯನ್ನು ಸೀಳಿಹಾಕುವರು."

## ಇಸ್ರಯೇಲಿಗಾಗಿ ಹೊಶೇಯನ ಪ್ರಾರ್ಥನೆ

**14** ಇಸ್ರಯೇಲ್, ನಿನ್ನ ಸರ್ವೇಶ್ವರನಾದ ದೇವರ ಬಳಿಗೆ ಹಿಂದಿರುಗು. ನಿನ್ನ ಪಾಪದ್ರೋಹಗಳೇ ನಿನ್ನ ಪತನಕ್ಕೆ ಕಾರಣ. 2ಆದುದರಿಂದ ಪಶ್ಚಾತ್ತಾಪದ ಮಾತುಗಳೊಂದಿಗೆ ದೇವರಿಗೆ ಅಭಿಮುಖವಾಗಿ, "ಪ್ರಭುವೇ, ನಮ್ಮ ಅಪರಾಧವನ್ನು ತೊಡೆದುಹಾಕು. ನಮ್ಮಲ್ಲಿ ಒಳಿತಾದುದನ್ನೇ ಅಂಗೀಕರಿಸು. ನಿನಗೆ ಸ್ತುತಿಬಲಿಯನ್ನು ಸಮರ್ಪಿಸುವೆವು. 3ಅಸ್ಸೀರಿಯದಿಂದ ನಮಗೆ ರಕ್ಷಣೆ ದೊರಕದು. ನಾವು ಕಾಳಗದ ಕುದುರೆಗಳ ಮೇಲೆ

ಇನ್ನೆಂದೂ ಸವಾರಿ ಮಾಡೆವು. ನಮ್ಮ ಕೈಗಳು ನಿರ್ಮಿಸಿರುವ ವಿಗ್ರಹಗಳನ್ನು ವೀಕ್ಷಿಸಿ, 'ನೀವೇ ನಮ್ಮ ದೇವರು' ಎಂದು ಜಪಿಸೆವು. ಓ ದೇವಾ, ದಿಕ್ಕಿಲ್ಲದವರಿಗೆ ಕರುಣೆತೋರಿಸುವವನು ನೀನೇ," ಎಂದು ಹೇಳು.

4 ಸರ್ವೇಶ್ವರ ಇಂತೆನ್ನುತ್ತಾರೆ:
ಪರಿಹರಿಸುವೆನು ಜನರ ಭ್ರಷ್ಟತನವನು
ಪ್ರೀತಿಸುವೆನು ಮನಪೂರ್ವಕವಾಗಿ ಅವರನು
ತ್ಯಜಿಸಿಬಿಡುವೆನು ಅವರ ಮೇಲಿದ್ದ ಕೋಪವನು.
5 ಇರುವೆನು ಇಸ್ರಯೇಲಿಗೆ ಇಬ್ಬನಿಯಂತೆ
ಅರಳುವುದು ಆ ನಾಡು ತಾವರೆಯಂತೆ
ಬೇರೂರುವುದು ಲೆಬನೋನಿನ ದೇವದಾರು
ವೃಕ್ಷದಂತೆ.
6 ಹರಡಿಕೊಳ್ಳುವುದದು ಮರದ ರೆಂಬೆಗಳಂತೆ
ಕಂಗೊಳಿಸುವುದು ಚೆಲುವಾದ ಓಲಿವ
ಮರದಂತೆ
ಅದರ ಪರಿಮಳ ಮನೋಹರ ಲೆಬನೋನಿನ
ಲತೆಗಳಂತೆ.
7 ಮರಳಿ ಆಶ್ರಯಿಸುವರು ನನ್ನ ನೆರಳನ್ನು ಆ ಜನತೆ
ಅಭಿವೃದ್ಧಿಯಾಗುವರು ಉದ್ಯಾನವನದಂತೆ
ಫಲಪ್ರದವಾಗುವರು ಆ ಜನರು
ದ್ರಾಕ್ಷಾಲತೆಯಂತೆ
ಸುಪ್ರಸಿದ್ಧ ಅವರ ಕೀರ್ತಿ ಲೆಬನೋನಿನ
ದ್ರಾಕ್ಷಾರಸದಂತೆ.
8 ನುಡಿವುದು ಎಫ್ರಯಿಮ್, "ನನಗಿನ್ನು ಬೇಡ
ವಿಗ್ರಹಗಳ ಗೊಡವೆ".
ಅದಕ್ಕೆ ಒಲಿದು ಕಟಾಕ್ಷಿಸುವವನು ನಾನೇ
ಅದಕ್ಕೆ ಹಚ್ಚಹಸಿರಾದ
ತುರಾಯಿಮರದಂತಿರುವೆ
ಅದಕ್ಕೆ ಫಲವನ್ನು ನೀಡುವವನು ನಾನೇ."

9 ಬುದ್ಧಿವಂತನು ಈ ಮಾತುಗಳನ್ನು ಗ್ರಹಿಸಿಕೊಳ್ಳಲಿ. ವಿವೇಕಿಯು ಈ ನುಡಿಗಳನ್ನು ಅರ್ಥಮಾಡಿಕೊಳ್ಳಲಿ. ಸರ್ವೇಶ್ವರಸ್ವಾಮಿಯ ಮಾರ್ಗಗಳು ನೇರವಾದವುಗಳು. ಸನ್ಮಾರ್ಗಿಗಳು ಅವುಗಳನ್ನು ಕೈಗೊಂಡು ನಡೆಯುವರು. ದುರ್ಮಾರ್ಗಿಗಳು ಅವುಗಳನ್ನು ಕೈಬಿಟ್ಟು ಮುಗ್ಗರಿಸಿ ಬೀಳುವರು.